ಸಂಪುಟ : 8 ಸಂಚಿಕೆ : 270 ಪುಟ : 4 ಬೆಲೆ : 3.00 ಬುಧವಾರ ಡಿಸೆಂಬರ್ 6, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 270 Pages : 4 Price : 3.00 Wednesday December 6, 2023 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಡಿಸೆಂಬರ್ 6ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 22 2000 ಮನೆಯ ಲೈನ್, 1600 ಮನೆಯ ಲೈನ್, 1800 ಮನೆಯ ಲೈನ್, 1400 ಮನೆಯ ಲೈನ್, 2000 ಮನೆಯ ಲೈನ್, 1400 ಮನೆಯ ಲೈನ್, 630 ಮನೆಯ ಲೈನ್, ಬಸ್ ಸ್ಟ್ಯಾಂಡ್ ಲೈನ್, ಹಾಸ್ಟೆಲ್ ಲೈನ್, ಮಸೂತಿಯ ಹಿಂದಿನ ಭಾಗ ಮುಂದಿನ ಭಾಗ.

ವಾರ್ಡ್ ನಂ. 7, 6, 10 ಮಲ್ಲೇಶಪ್ಪನ ಲೈನ್, ಅಬ್ಬಿಗೇರಿಯವರ ಲೈನ್, ನಂದರಗಿಯವರ ಲೈನ್, ಗಚ್ಚಿಯವರ ಲೈನ್, ಬಚ್ಚಲಕ್ಕಮ್ಮನ ಗುಡಿ ಲೈನ್, ಪಿಂಡಕೋರ ಲೈನ್, ಪೆಂಡಾರ ಓಣಿ, ಅಂಬೇಡ್ಕರ್ ನಗರ, ಭಜಂತ್ರಿ ಓಣಿ, ಹೂಲಿಯವರ ಲೈನ್, ಜನತಾ ಪ್ಲಾಟ್, ಉಚ್ಚನಗೌಡ್ರು ಓಣಿ, ಚನ್ನೇಗೌಡರ ಓಣಿ,

ವಾರ್ಡ್ ನಂ. 15, 16, 17 ಜವಳಗಲ್ಲಿ, ಡಿಸಿ ಮಿಲ್ ರೋಡ್, ಭಜಂತ್ರಿ ಓಣಿ, ಮೀನ ಮಾರ್ಕೆಟ್, ಶಹಪೂರ ಪೇಟೆ, ಗಣೇಶ ಗುಡಿ ಕೆಲವು ಉಳಿದ ಭಾಗಗಳು. ವಾರ್ಡ್ ನಂ. 27, 30 ಕಾಶಿ ವಿಶ್ವನಾಥ ನಗರ, ಅಸೂಟಿಯವರ ಲೈನ್, ಹನುಮಂತ ದೇವರ ಗುಡಿ ಲೈನ್, ದುರುಗಮ್ಮನ ಗುಡಿ ಲೈನ್, ಕಣವಿಯವರ ಲೈನ್, ಮಾಳಕೊಟೇಶ್ವರ ಸಂಧಿ, ವಿ ಆರ್ ಎಲ್ ಆಫೀಸ್ ಹಿಂದಿನ ಭಾಗ, ಟಿವಿಎಸ್ ಶೋರೂಮ್, ಎಸ್ ಪಿ ಆಫೀಸ್,

ವಾರ್ಡ್ ನಂ. 1 ಎಸ್ ಎಂ ಕೃಷ್ಣ ನಗರ ಕೆಳಗಿನ ಭಾಗ ಮೇಲಿನ ಭಾಗಗಳು, ಎಲ್ಲಮ್ಮನ ಗುಡಿ ಲೈನ್, ಆಟೋ ಸ್ಟ್ಯಾಂಡ್ ಲೈನ್, ಹಾಸ್ಟೆಲ್ ಲೈನ್, ಕನ್ನಡ ಶಾಲೆ ಮಸೂತಿ ಲೈನ್.

ಈಗಾಗಲೇ ಕುಡಿಯುವ ನೀರಿನ ನಳ ಹೊಂದಿರುವ ಬಾಗಿದಾರರ ಪಟ್ಟಿ ತಯಾರಿಸಿದ್ದು ಅವುಗಳನ್ನು ದೃಶ್ಯ ಮಾಧ್ಯಮ ಹಾಗೂ ಸುದ್ದಿ ಮಾಧ್ಯಮಗಳಲ್ಲಿ ಪ್ರಕಟಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ನಾಗರಿಕರು ಕೂಡಲೆ ತಮ್ಮ ಕುಡಿಯುವ ನೀರಿನ ಕರವನ್ನು ಸಂದಾಯ ಮಾಡಿ ಸಹಕರಿಸಲು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಖಾಸಗಿ ಸಹಭಾಗಿತ್ವದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ–ಸಚಿವ ಹೆಚ್.ಕೆ. ಪಾಟೀಲ್

## ಪ್ರವಾಸೋದ್ಯಮಕ್ಕೆ 339.54 ಕೋಟಿ ರೂ. ಮೀಸಲು

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ–ಸುವರ್ಣಸೌಧ

ರಾಜ್ಯದಲ್ಲಿರುವ 25 ಸಾವಿರಕ್ಕೂ ಹೆಚ್ಚಿನ ಸ್ಮಾರಕಗಳ ರಕ್ಷಣೆಗೆ ಸರ್ಕಾರ ಕ್ರಮ ವಹಿಸಿದೆ. ಖಾಸಗಿ ಸಹಭಾಗಿತ್ವದಲ್ಲಿ ರಾಜ್ಯದಲ್ಲಿನ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ಯೋಜನೆ ರೂಪಿಸಲಾಗುವುದು ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಹೆಚ್.ಕೆ. ಪಾಟೀಲ್ ಹೇಳಿದರು.

ಬೆಳಗಾವಿಯ ಸುವರ್ಣಸೌಧದಲ್ಲಿ ಮಂಗಳವಾರದ ವಿಧಾನಸಭಾ ಅಧಿವೇಶನದ ಪ್ರಶ್ನೋತ್ತರ ವೇಳೆಯಲ್ಲಿ ಶಾಸಕರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿ ಅವರು ಮಾತನಾಡಿದರು.

ಸ್ಮಾರಕಗಳನ್ನು ದತ್ತು ತೆಗೆದುಕೊಳ್ಳುವ ಯೋಜನೆ ಜಾರಿಯಲ್ಲಿದೆ. ಪ್ರವಾಸಿ ತಾಣಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗುವುದು. ಕರ್ನಾಟಕ ಪ್ರವಾಸೋದ್ಯಮ ನೀತಿ–2020–26 ಅಡಿ ರಾಜ್ಯದ ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡದಲ್ಲಿ ಸಾಹಸ, ಕೃಷಿ, ಮನರಂಜನಾ, ಕ್ಯಾರವಾನ್, ಸಾಂಸ್ಕೃತಿಕ ಪ್ರವಾಸೋದ್ಯಮ, ಸಾಂಸ್ಕೃತಿಕ ಗ್ರಾಮ, ಪರಿಸರ, ಪಾರಂಪರಿಕ, ಹೋಂಸ್ಟೇ, ಹೋಟೆಲ್, ಹೌಸ್ ಬೋಟ್, ವಸ್ತು ಸಂಗ್ರಹಾಲಯ, ಗ್ಯಾಲರಿ, ರೋಪ್ ವೇ, ಧ್ವನಿ ಮತ್ತು ಬೆಳಕು, ಥೀಮ್ ಪಾರ್ಕ್ ಸೇರಿದಂತೆ 26 ರೀತಿಯ ಪ್ರವಾಸಿ ಉತ್ಪನ್ನಗಳನ್ನು ಅಭಿವೃದ್ಧಿಪಡಿಸಲು ಮುಂದೆ ಬರುವ ಖಾಸಗಿ ಬಂಡವಾಳ ಹೂಡಿಕೆದಾರರನ್ನು ಸೆಳೆಯಲು ಸಹಾಯಧನ ಪ್ರೋತ್ಸಾಹಕಗಳು ಮತ್ತು ರಿಯಾಯಿತಿಗಳನ್ನು ನೀಡಲಾಗಿದೆ ಎಂದರು.



ಜೈನ ಕಾಶಿ ಮೂಡಬಿದರಿಯ ಯಾತ್ರಿ ನಿವಾಸಕ್ಕೆ 15 ಹೆಚ್ಚುವರಿ ಕೊಠಿಗಳ ನಿರ್ಮಾಣ ಕಾಮಗಾರಿಗೆ ರೂ.70 ಲಕ್ಷ ಮಂಜೂರಾಗಿದ್ದು, ಸರ್ಕಾರದಿಂದ ರೂ.52.50 ಲಕ್ಷ ಬಿಡುಗಡೆ ಮಾಡಲಾಗಿದೆ. ಕಾಮಗಾರಿ ಪೂರ್ಣಗೊಂಡಿದೆ. ಸಸಿಹಿತ್ಲು ಅಭಿವೃದ್ಧಿ ಕಾಮಗಾರಿಗೆ ರೂ.25 ಲಕ್ಷ ಮೀಸಲಿರಿಸಿದ್ದು, ಆದ್ಯತೆಯ ಮೇರೆಗೆ ಶೀಘ್ರವೇ ಕೈಗೆತ್ತಿಕೊಂಡು ಕಾಮಗಾರಿ ಆರಂಭಿಸಲಾಗುವುದು ಎಂದು ಸಚಿವ ಹೆಚ್.ಕೆ. ಪಾಟೀಲ್ ಉತ್ತರಿಸಿದರು.

ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮಾತನಾಡಿ, ಜಲ ಸಾಹಸ ಕ್ರೀಡಗಳನ್ನು ಕಲಿಯಲು ರಾಜ್ಯದಿಂದ ಹೊರ ರಾಷ್ಟ್ರಗಳಿಗೆ ಅನೇಕರು ತೆರಳುತ್ತಾರೆ. ರಾಜ್ಯದಲ್ಲಿ ಸುಮಾರು 300 ಕಿ.ಮೀ ಉದ್ದದ ಕರಾವಳಿ ತೀರವಿದೆ. ಇಲ್ಲಿ ಖಾಸಗಿ ಸಹಭಾಗಿತ್ವದಲ್ಲಿ ಜಲ ಸಾಹಸ ಕ್ರೀಡೆಗಳ ಪ್ರವಾಸೋದ್ಯಮಕ್ಕೆ ಸರ್ಕಾರ ಮುಂದಾಗಬೇಕು ಎಂದು ಕೋರಿದರು.

ಶಾಸಕ ಉಮಾನಾಥ ಕೋಟ್ಯಾನ್ ಮಾತನಾಡಿ, 2012–13ರಲ್ಲಿ ಮೂಡುಬಿದರಿ ಕ್ಷೇತ್ರದ ಸಸಿಹಿತ್ಲು ಕಡಲ ತೀರದಲ್ಲಿ ಅಂತಾರಾಷ್ಟ್ರೀಯ ಸರ್ಫಿಂಗ್ ಪಂದ್ಯಾವಳಿ ಆಯೋಜಿಸಲಾಗಿತ್ತು. ಇದಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಸರ್ಫಿಂಗ್‌ನಂತಹ ಸಾಹಸ ಕ್ರೀಡೆಯ ಉತ್ತೇಜನಕ್ಕೆ ಸರ್ಕಾರ ಮುಂದಾಗಬೇಕು. ಸಸಿಹಿತ್ಲು ಪ್ರದೇಶದಲ್ಲಿನ ಕುಡಿಯುವ ನೀರು ಹಾಗೂ ಬೀದಿದೀಪ ಅಳವಡಿಸುವ ಕಾಮಗಾರಿಯನ್ನು ಕೂಡಲೇ ಪ್ರಾರಂಭಿಸುವಂತೆ ಒತ್ತಾಯಿಸಿದರು.

▸▸ 3ನೇ ಪುಟಕ್ಕೆ

## ಡಿ.7ರಿಂದ 9ರವರೆಗೆ ರಾಜ್ಯಮಟ್ಟದ ಹಾಕಿ ಪಂದ್ಯಾವಳಿ

■ ವಿಜಯಸಾಕ್ಷಿ ಸುದ್ದಿ, ಗದಗ

2023–24ನೇ ಸಾಲಿನ ಪದವಿಪೂರ್ವ ಕಾಲೇಜು ವಿದ್ಯಾರ್ಥಿಗಳ ರಾಜ್ಯಮಟ್ಟದ ಹಾಕಿ ಪಂದ್ಯಾವಳಿಗಳು ಡಿ.7ರಿಂದ 9ರವರೆಗೆ ಬೆಟಗೇರಿಯ ಮಹಾತ್ಮ ಗಾಂಧಿ ಹಾಕಿ ಕ್ರೀಡಾಂಗಣದಲ್ಲಿ ನಡೆಯಲಿದೆ ಎಂದು ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಉಪನಿರ್ದೇಶಕ ಡಾ. ಕೃಷ್ಣಪ್ಪ.ಪಿ. ಮಾಹಿತಿ ನೀಡಿದರು.

ಇಲ್ಲಿನ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಡಿ.7ರಂದು ಸಂಜೆ 5 ಗಂಟೆಗೆ ಉದ್ಘಾಟನಾ ಸಮಾರಂಭ ನಡೆಯಲಿದೆ. ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಪಂದ್ಯಾವಳಿಗಳಿಗೆ ಚಾಲನೆ ನೀಡಲಿದ್ದಾರೆ.

ಈ ರಾಜ್ಯಮಟ್ಟದ ಕ್ರೀಡಾಕೂಟದಲ್ಲಿ ಪ್ರತಿ ಜಿಲ್ಲೆಯಿಂದ ಬಾಲಕರ ಹಾಗೂ ಬಾಲಕಿಯರ ಪ್ರತ್ಯೇಕ ತಂಡಗಳು ಭಾಗವಹಿಸಲಿವೆ. ಒಟ್ಟು 60 ತಂಡಗಳು, 1200 ಕ್ರೀಡಾಪಟುಗಳು, 60 ಜನ ಮೇಲ್ವಿಚಾರಕರು, ಇಲಾಖೆಯ ಹಿರಿಯ ಅಧಿಕಾರಿಗಳು ಮತ್ತು 22 ಜನ ರೆಫರಿಗಳು ಆಗಮಿಸಲಿದ್ದಾರೆ ಎಂದು ತಿಳಿಸಿದರು.




ರಾಜ್ಯಮಟ್ಟದ ಹಾಕಿ ಕ್ರೀಡಾಕೂಟಕ್ಕೆ ಆಗಮಿಸುವ ಎಲ್ಲ ಕ್ರೀಡಾಪಟುಗಳಿಗೆ ಊಟ, ವಸತಿ ವ್ಯವಸ್ಥೆ ಕಲ್ಪಿಸಲಾಗಿದೆ. ಮಹಾತ್ಮ ಗಾಂಧಿ ಕ್ರೀಡಾಂಗಣವಷ್ಟೇ ಅಲ್ಲದೆ, ಜಿಲ್ಲಾ ಕ್ರೀಡಾಂಗಣ, ವಿಡಿಎಸ್‌ಟಿಸಿ ಮೈದಾನದಲ್ಲೂ ಪಂದ್ಯಾವಳಿ ನಡೆಯಲಿದೆ. ಹೆಚ್ಚುವರಿಯಾಗಿ ಒಂದು ಕ್ರೀಡಾಂಗಣವನ್ನು ಮೀಸಲಿಡಲಾಗಿದೆ ಎಂದು ಮಾಹಿತಿ ನೀಡಿದರು.

ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ), ಗದಗ ಜಿಲ್ಲಾ ಪದವಿಪೂರ್ವ ಕಾಲೇಜುಗಳ ಪ್ರಾಚಾರ್ಯರ ಸಂಘ, ಕರ್ನಾಟಕ ರಾಜ್ಯ ಪದವಿಪೂರ್ವ ಮಹಾವಿದ್ಯಾಲಯಗಳ ನೌಕರರ ಸಂಘದ ಗದಗ ಜಿಲ್ಲಾ ಘಟಕ, ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘ, ದೈಹಿಕ ಶಿಕ್ಷಣ ಉಪನ್ಯಾಸಕರ ಸಂಘ ಹಾಗೂ ಹನುಮಾನ್ ಬ್ಲೆಸ್ಸಿಂಗ್ಸ್ ಸ್ಪೋರ್ಟ್ಸ್ ಕ್ಲಬ್ ಸಹಯೋಗದಲ್ಲಿ ಈ ಪಂದ್ಯಾವಳಿಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಡಾ. ಕೃಷ್ಣಪ್ಪ.ಪಿ. ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಡಿ.ಜಿ. ಜೋಗಣ್ಣವರ, ಎಂ.ಸಿ. ಕಟ್ಟಿಮನಿ, ಎಸ್.ಎಸ್. ಸೋಮಣ್ಣವರ, ರಮೇಶ, ಅಶೋಕ ಅಂಗಡಿ, ಜಿ.ಎಸ್. ಶಿರಸಿ, ಬಿ.ಜಿ. ಗಿರಿತಮ್ಮಣ್ಣವರ, ಪಿ.ಎಸ್. ದಲಾಲಿ, ಅರ್ಜುನ ಗೊಳಸಂಗಿ, ಡಿ.ಎಲ್. ಪಾಟೀಲ, ಸತೀಶ ಪಾಸಿ ಮುಂತಾದವರು ಉಪಸ್ಥಿತರಿದ್ದರು.

## 3 ಪ್ರಮುಖ ವಿಧೇಯಕಗಳ ಮಂಡನೆ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ–ಸುವರ್ಣಸೌಧ



ಬೆಳಗಾವಿ ಸುವರ್ಣಸೌಧದಲ್ಲಿ ಮಂಗಳವಾರ ನಡೆದ ವಿಧಾನಸಭೆಯಲ್ಲಿ 3 ಪ್ರಮುಖ ವಿಧೇಯಕಗಳನ್ನು ಮಂಡಿಸಲಾಯಿತು.

2023ನೇ ಸಾಲಿನ ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ವಿಧೇಯಕವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಸದನದಲ್ಲಿ ಮಂಡಿಸಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಅವರು, 2023ನೇ ಸಾಲಿನ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ವಿಧೇಯಕವನ್ನು ಸದನದಲ್ಲಿ ಮಂಡಿಸಿದರು.

2023ನೇ ಸಾಲಿನ ಕರಾವಳಿ ಅಭಿವೃದ್ಧಿ ಮಂಡಳಿ ವಿಧೇಯಕವನ್ನು ಯೋಜನೆ ಮತ್ತು ಸಾಂಖ್ಯಿಕ ಸಚಿವ ಡಿ.ಸುಧಾಕರ್ ಅವರ ಬದಲಿಗೆ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಹೆಚ್. ಕೆ. ಪಾಟೀಲ್ ಅವರು ಸದನದ ಮುಂದೆ ಮಂಡಿಸಿದರು. ಈ ವಿಧೇಯಕಗಳು ಅಧಿವೇಶನದಲ್ಲಿ ಚರ್ಚೆಗೆ ಬರಲಿವೆ.

ಇದಕ್ಕೂ ಮುನ್ನ ಸಚಿವ ಹೆಚ್.ಕೆ. ಪಾಟೀಲ್ ಅವರು 1965ರ ಕರ್ನಾಟಕ ಸಾರ್ವಜನಿಕ ಗ್ರಂಥಾಲಯಗಳ ಅಧಿನಿಯಂ ಕಲಂ 3(2)(ಬಿ) ಮೇರೆಗೆ ವರ್ಗಾಯಿಸಬಹುದಾದ ಒಂಟಿ ಮತದ ಮೂಲಕ ದಾಮಾಷಾ ಪ್ರಾತಿನಿಧ್ಯದ ತತ್ವದ ಆಧಾರದ ಮೇಲೆ ವಿಧಾನಸಭೆಯಿಂದ ರಾಜ್ಯ ಗ್ರಂಥಾಲಯ ಪ್ರಾಧಿಕಾರಕ್ಕೆ ನಾಲ್ಕು ಸದಸ್ಯರನ್ನು ಚುನಾಯಿಸಲು ಕೋರಿದರು.

## ಬಾರ್ ಲೈಸೆನ್ಸ್ ನೀಡಿಕೆಯ ಕುರಿತು ಚರ್ಚೆ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ–ಸುವರ್ಣಸೌಧ

ಸದದಲ್ಲಿ ಬಾರ್ ಲೈಸೆನ್ಸ್ ನೀಡಿಕೆ ಸಂಬಂಧಿಸಿದಂತೆ ಮಂಗಳವಾರ ವಿಧಾನಸಭೆಯಲ್ಲಿ ಚರ್ಚೆ ನಡೆಯಿತು. ಸಿಎಲ್–7 ಸನ್ನದುಗಳ ನೀಡಿಕೆಯಲ್ಲಿ ನಿಯಮಗಳನ್ನು ಸರಿಯಾಗಿ ಪಾಲಿಸುತ್ತಿಲ್ಲ, ಮನಸ್ಸಿಗೆ ಬಂದಂತೆ ನೀಡಲಾಗುತ್ತಿದೆ ಎಂಬ ಸದಸ್ಯರ ಆರೋಪಗಳಿಗೆ ಉತ್ತರಿಸಿದ ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ, ನಿಯಮಗಳ ಅನುಸಾರವೇ ಸಿಎಲ್–7 ಬಾರ್ ಲೈಸೆನ್ಸ್ ನೀಡಲಾಗಿದೆ. ಸಿಎಲ್–7 ಸನ್ನದುಗಳ ನೀಡಿಕೆಯ ಈಗಿರುವ ನಿಯಮಗಳಲ್ಲಿ ಲಾಡ್ಜಿಂಗ್ ವಿನ್ಯಾಸ ಎಷ್ಟಿರಬೇಕು ಮತ್ತು ಪಾರ್ಕಿಂಗ್ ಹೇಗಿರಬೇಕು ಎಂಬುದರ ಬಗ್ಗೆ ಯಾವುದೇ ಅಂಶಗಳಿಲ್ಲ. ಆ ಬಗ್ಗೆ ಮುಂದಿನ ದಿನಗಳಲ್ಲಿ ಸೇರ್ಪಡೆಗೆ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ಬಂಗಾರಪೇಟೆ ಶಾಸಕ ನಾರಾಯಣಸ್ವಾಮಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಅವರು, ಬಾರ್ ಲೈಸೆನ್ಸ್‌ಗಳ ನೀಡಿಕೆಯಲ್ಲಿ ಮೀಸಲಾತಿ ಅನುಷ್ಠಾನ ವಿಚಾರ ಸರಕಾರದ ಗಮನದಲ್ಲಿದ್ದು, ಕಾನೂನು ಜಾರಿಗೊಳಿಸಿ ಅನುಷ್ಠಾನಗೊಳಿಸುವುದಕ್ಕೆ ಕ್ರಮ ವಹಿಸಲಾಗುವುದು ಎಂದರು.

ಕೋಲಾರ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ 56 ಸಿಎಲ್–7 ಸನ್ನದುಗಳನ್ನು ಮಂಜೂರು ಮಾಡಲಾಗಿದೆ. ಕೋಲಾರ ಜಿಲ್ಲೆಯ ಅಬಕಾರಿ ಅಧೀಕ್ಷಕ ರಂಗಪ್ಪ ಅವರ ಮೇಲಿನ ಆರೋಪಗಳ ಕುರಿತು ಇಲಾಖೆಯ ಹಿರಿಯ ಅಧಿಕಾರಿಗಳಿಂದ ವಿಚಾರಣೆ ನಡೆಸಿ, ವರದಿ ತರಿಸಿಕೊಳ್ಳಲಾಗುವುದು. ವರದಿ ಆಧರಿಸಿ ಕ್ರಮಕೈಗೊಳ್ಳಲಾಗುವುದು ಎಂದರು.

### ಗದಗ–ಬೆಟಗೇರಿ ಶಹರ ಕಾಂಗ್ರೆಸ್‌ನಿಂದ ಡಾ. ಬಿ.ಆರ್. ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ

## ಮಹಾಪರಿನಿರ್ವಾಣ ದಿನ ಆಚರಣೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಡಾ. ಬಿ.ಆರ್. ಅಂಬೇಡ್ಕರರ ಮಹಾಪರಿನಿರ್ವಾಣ ದಿನದ ಅಂಗವಾಗಿ ಡಿ. 6ರಂದು ಬೆಳಿಗ್ಗೆ 10 ಗಂಟೆಗೆ ನಗರಸಭೆಯ ಆವರಣದಲ್ಲಿರುವ ಡಾ. ಬಿ.ಆರ್ ಅಂಬೇಡ್ಕರರ ಪುತ್ಥಳಿಗೆ ಗದಗ ಜಿಲ್ಲಾ ಯುವ ಕಾಂಗ್ರೆಸ ಸಮಿತಿ ಪ್ರಧಾನಕಾರ್ಯರ್ಶಿ ಕೃಷ್ಣಗೌಡ.ಎಚ್. ಪಾಟೀಲ ಮಾಲಾರ್ಪಣೆ ಮಾಡಲಿದ್ದು, ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಕಾರ್ಯಾಲಯದಲ್ಲಿ ಡಾ. ಅಂಬೇಡ್ಕರರ ಭಾವಚಿತ್ರಕ್ಕೆ ಪೂಜಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.



ಈ ಕಾರ್ಯಕ್ರಮಕ್ಕೆ ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರು, ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್, ಜಿಲ್ಲಾ ಪಂಚಾಯಿತಿ,, ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ, ಎಪಿಎಂಸಿ ಪಕ್ಷದ ಅಧ್ಯಕ್ಷರು ಹಾಗೂ ಸದಸ್ಯರು, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು ಹಾಗೂ ಸದಸ್ಯರು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲೀಗಲ್ ರಿಫಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗಗಳ ಅಧ್ಯಕ್ಷರು ಹಾಗೂ ಸದಸ್ಯರು, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಗದಗ–ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಅಶೋಕ ಮಂದಾಲಿ, ಗದಗ–ಬೆಟಗೇರಿ ಶಹರ ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗದ ಅಧ್ಯಕ್ಷ ಶಂಭು ಕಾಳೆ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

## ನಾಳೆ ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಗದಗ



110 ಕೆವ್ಹಿ ಮುಂಡರಗಿ, 110 ಕೆವ್ಹಿ ಡಂಬಳ ಹಾಗೂ 110 ಕೆವ್ಹಿ ಶಿಂಗಟಾಲೂರು ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸ ಕೈಗೊಳ್ಳುವುದರಿಂದ ಡಿ.7ರಂದು ಮುಂಜಾನೆ 10 ಗಂಟೆಯಿಂದ ಸಾಯಂಕಾಲ 6 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

110ಕೆ.ವ್ಹಿ. ವಿದ್ಯುತ್ ಉಪಕೇಂದ್ರ ಡಂಬಳ–110 ಕೆವ್ಹಿ ಐಪಿಪಿ ಮೆ.ಸುಜಲಾನ್ ಲಿ., ಹಾರೋಗೇರಿ, ಮೆ.ಎನಾರ್ಕಾನ್ ಲಿ., ಮೆ. ಅಕಿಲಾಗ್ಯಾ ಸೋಲಾರ, ಮೆ.ಚುರ್ಚಿಹಾಳ ನೀರಾವರಿ, 33ಕೆ.ವ್ಹಿ. ನೀರು ಸರಬರಾಜು ಡಂಬಳ, 110 ಕೆ.ವ್ಹಿ. ಡಂಬಳ ವಿದ್ಯುತ್ ಉಪಕೇಂದ್ರದಿಂದ ಹೊರ ಹೋಗುವ ಎಲ್ಲ 11ಕೆ.ವ್ಹಿ. ಮಾರ್ಗಗಳು. 110ಕೆ.ವ್ಹಿ. ವಿದ್ಯುತ್ ಉಪಕೇಂದ್ರ ಮುಂಡರಗಿ–110ಕೆ.ವ್ಹಿ. ಐಪಿಪಿ ಮೆ.ವಿಜಯನಗರ ಶುಗರ್ಸ್ ಲಿ., ಮೆ.ಬೀಡನಾಳ ನೀರಾವರಿ, 33ಕೆ. ಕೆ.ವ್ಹಿ. ನೀರು ಸರಬರಾಜು ಶಿಂಗಟಾಲೂರು, 110 ಕೆ.ವ್ಹಿ. ಮುಂಡರಗಿ ವಿದ್ಯುತ್ ಉಪಕೇಂದ್ರದಿಂದ ಹೊರ ಹೋಗುವ ಎಲ್ಲ 11 ಕೆ.ವ್ಹಿ. ಮಾರ್ಗಗಳು.

110ಕೆ.ವ್ಹಿ. ವಿದ್ಯುತ್ ಉಪಕೇಂದ್ರ ಶಿಂಗಟಾಲೂರು–110 ಕೆ.ವ್ಹಿ. ಶಿಂಗಟಾಲೂರು ವಿದ್ಯುತ್ ಉಪಕೇಂದ್ರದಿಂದ ಹೊರಹೋಗುವ ಎಲ್ಲ 11ಕೆ. ಕೆ.ವ್ಹಿ. ಮಾರ್ಗಗಳು, 110 ಕೆವ್ಹಿ ಮುಂಡರಗಿ, 110 ಕೆವ್ಹಿ ಡಂಬಳ ಹಾಗೂ 110 ಕೆವ್ಹಿ ಶಿಂಗಟಾಲೂರು ವಿದ್ಯುತ್ ವಿತರಣಾ ಕೇಂದ್ರಗಳಿಂದ ವಿತರಣೆಯಾಗುವ ಎಲ್ಲಾ ನಗರ ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ಹಾಗೂ ಮೇಲೆ ತಿಳಿಸಿದ ಎಲ್ಲ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಕಾರಣ ಸಾರ್ವಜನಿಕರು ಈ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕೆಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಫಲಾನುಭವಿಗಳಿಗೆ ಶ್ರವಣ ಯಂತ್ರ ವಿತರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಜಿಮ್ಸ್ ಗದಗನಲ್ಲಿ ಸೋಮವಾರದಂದು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಶ್ರವಣ ದೋಷ ಹೊಂದಿದ ವಿಕಲ ಚೇತನ ಪ್ರಮಾಣ ಪತ್ರ ಹೊಂದಿರುವ ಅಭ್ಯರ್ಥಿಗಳಿಗೆ ಎಸ್.ಸಿ.ಪಿ ಮತ್ತು ಟಿ ಎಸ್ ಪಿ ಯೋಜನೆ ಅಡಿಯಲ್ಲಿ ಶ್ರವಣ ಯಂತ್ರ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ 05 ಮಕ್ಕಳು, 05 ಮಹಿಳೆಯರು ಮತ್ತು 12 ಪುರುಷರು ಫಲಾನುಭವಿಗಳಿದ್ದರು.

ಪ. ಜಾತಿ ಮತ್ತು ಪ. ಪಂಗಡದ ಶ್ರವಣ ದೋಷ ಹೊಂದಿದ ವಿಕಲ ಚೇತನ ಪ್ರಮಾಣ ಪತ್ರ ಹೊಂದಿರುವ ಅಭ್ಯರ್ಥಿಗಳು ಈ ಯೋಜನೆ ಅಡಿಯಲ್ಲಿ ಅಗತ್ಯ ದಾಖಲೆಗಳೊಂದಿಗೆ ಕಿವಿ, ಮೂಗು ಗಂಟಲು ವಿಭಾಗದಲ್ಲಿ ನೋಂದಾಯಿಸಿಕೊಂಡು ಯೋಜನೆಯ ಸದುಪಯೋಗಪಡೆದುಕೊಳ್ಳಬೇಕು ಎಂದು ಜಿಮ್ಸ್ ನಿರ್ದೇಶಕರಾದ ಡಾ. ಬಸವರಾಜ ಪಿ. ಬೊಮ್ಮನಹಳ್ಳಿ ಅವರು ತಿಳಿಸಿದರು.

## ಸಾಕ್ಷಿ ಸುಭಾಷಿತ

ಸಿಟ್ಟು ಬಂದಾಗ ಖಡ್ಗವನ್ನು ಮಾತ್ರ ಬೇಕಾದರೆ ತೆಗೆಯಿರಿ, ಆದರೆ ನಾಲಿಗೆಯನ್ನು ಮಾತ್ರ ತೆಗೆಯಬೇಡಿ
–ತುಳಸೀದಾಸ್

## ಸಂಪಾದಕೀಯ

# ನೀರು, ಮೇವು ಕೊರತೆ ನೀಗಿಸಿದರೆ ಬರ ನಿರ್ವಹಣೆ ಮಾಡಿದಂತೆಯೆ?

ಬೆಳಗಾವಿಯಲ್ಲಿ ಚಳಿಗಾಲದ ವಿಶೇಷ ಅಧಿವೇಶನ ಆರಂಭವಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಹಿಂದೆ ಹೇಳಿದಂತೆ ಈ ಬಾರಿ ಅಧಿವೇಶನದಲ್ಲಿ ಉತ್ತರ ಕರ್ನಾಟಕದ ಜ್ವಲಂತ ಸಮಸ್ಯೆಗಳ ಬಗ್ಗೆ ಹೆಚ್ಚು ಚರ್ಚೆ ಮಾಡುತ್ತೇವೆ ಎಂದಿದ್ದಾರೆ. ಆದರೆ ಕಳೆದೊಂದು ದಶಕದಿಂದ ನಡೆಯದ ಚರ್ಚೆ ಈ ಬಾರಿಯೂ ನಡೆಯುವುದಿಲ್ಲ ಎನ್ನುವುದು ಈಗಾಗಲೇ ಸ್ಪಷ್ಟವಾಗಿದೆ.

ಸದ್ಯ ಉತ್ತರ ಕರ್ನಾಟಕ– ದಕ್ಷಿಣ ಕರ್ನಾಟಕ ಎನ್ನುವುದಕ್ಕಿಂತ ರಾಜ್ಯಾದ್ಯಂತ ಈ ಬಾರಿ ಬರ ಎದುರಾಗಿದೆ. ಬರ ನಿರ್ವಹಣೆ ವಿಷಯವೇ ಚಳಿಗಾಲದ ಅಧಿವೇಶನದ ಪ್ರಮುಖ ಚರ್ಚಾ ವಿಷಯವಾಗಬೇಕಿದೆ. ಆದರೆ ನಿರೀಕ್ಷೆಯಷ್ಟು ಬರ ನಿರ್ವಹಣೆ ವಿಷಯ ಚರ್ಚೆಯಾಗುತ್ತಿಲ್ಲ. ಪ್ರತಿಪಕ್ಷದ ಸದಸ್ಯರು ಅಷ್ಟಾಗಿ ಬರ ವಿಚಾರವನ್ನು ಪ್ರಸ್ತಾಪಿಸದೆ, ರಾಜಕೀಯ ಲೆಕ್ಕಾಚಾರದ ಮಾತುಗಳನ್ನು ಆಡುತ್ತಿರುವುದು ಸ್ಪಷ್ಟವಾಗುತ್ತಿದೆ.

ಇದೆಲ್ಲದರ ಮಧ್ಯೆ ಸರಕಾರ ಬರ ನಿರ್ವಹಣೆ ಕುರಿತು ಎಲ್ಲ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಮಾರ್ಗಸೂಚಿಯೊಂದನ್ನು ಕಳುಹಿಸಿದೆ. ಜನ, ಜಾನುವಾರುಗಳಿಗೆ ಕುಡಿಯುವ ನೀರು ಮತ್ತು ಮೇವಿನ ಕೊರತೆಯಾಗದಂತೆ ಎಚ್ಚರಿಕೆ ವಹಿಸಿ ಎನ್ನುವುದು ಸೂಚನೆಯ ಸ್ಪಷ್ಟ ಸಂದೇಶ. ಬರ ಸಂದರ್ಭದಲ್ಲಿ ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಇವೆರಡನ್ನು ಒದಗಿಸಿದರೆ ಸರಕಾರ ಬರ ಗೆದ್ದಂತೆಯೆ ಎನ್ನುವುದು ಯಕ್ಷ ಪ್ರಶ್ನೆಯಾಗಿದೆ.

ಬರ ಬಂದರೆ ಆಹಾರ ಉತ್ಪಾದನೆ ಕುಂಠಿತವಾಗುತ್ತದೆ. ಅನ್ನ ಬೆಳೆಯುವ ರೈತ ದುಡ್ಡು ಕೊಟ್ಟು ದವಸ ಧಾನ್ಯಗಳನ್ನು ಖರೀದಿ ಮಾಡಬೇಕಾದ ಅನಿವಾರ್ಯತೆ ಎದುರಾಗುತ್ತದೆ. ಬಿತ್ತಿದ ಬೆಳೆ ಕೈಗೆ ಬರದೆ ನಯಾಪೈಸೆ ಇಲ್ಲದೇ ಜೀವನ ಮಾಡಬೇಕಾದ ಅನಿವಾರ್ಯತೆ ಎದುರಾಗುತ್ತದೆ. ಈ ಬಗ್ಗೆ ಕನಿಷ್ಠ ಪ್ರಜ್ಞೆಯೂ ಇಲ್ಲದ ಸರಕಾರ ಮಾತ್ರ ನೀರು, ಮೇವು ಎರಡನ್ನು ಒದಗಿಸುವುದೊಂದೆ ಕೆಲಸ ಎನ್ನುವಂತೆ ವರ್ತಿಸುತ್ತಿದೆ.

ರಾಜ್ಯದಲ್ಲಿ ಗ್ಯಾರಂಟಿ ಯೋಜನೆ ಮೂಲಕ ವಿದ್ಯುತ್ ಉಚಿತವಾಗಿ ಕೊಡಲಾಗುತ್ತಿದೆ. ಪ್ರತಿ ಕುಟುಂಬಕ್ಕೆ 10 ಕೆಜಿ ಅಕ್ಕಿ ನೀಡಲಾಗುತ್ತಿದೆ. ಬರಕ್ಕೆ ತುತ್ತಾದ ರೈತನಿಗೆ ಇದ್ಯಾವುದು ಸಾಲುವುದಿಲ್ಲ. ಬರ ಸಂದರ್ಭದಲ್ಲಿ ಮುಖ್ಯವಾಗಿ ಬೇಕಾಗಿದ್ದು ದುಡಿಯುವ ಕೈಗಳಿಗೆ ಕೆಲಸ. ಆರ್ಥಿಕ ಚೈತನ್ಯ. ಅದಕ್ಕಾಗಿ ಸರಕಾರ ಬರ ಘೋಷಣೆ ಮಾಡಿದ ತಕ್ಷಣವೇ ಬೆಳೆ ಪರಿಹಾರ ನೀಡಬೇಕು. ಉದ್ಯೋಗ ಖಾತ್ರಿ ಮೂಲಕ ಹೆಚ್ಚುವರಿ 100 ಮಾನವ ದಿನಗಳನ್ನು ಸೃಜನೆ ಮಾಡಿ ಕೆಲಸ ಕೊಡಬೇಕು.

ಬರ ಕಾಮಗಾರಿಗೆ ಕೇಂದ್ರ ಸರಕಾರ ಅನುದಾನ ನೀಡುತ್ತಿಲ್ಲ ಎಂದು ದೂರುವುದನ್ನು ಬಿಟ್ಟು ವಿಪತ್ತು ನಿರ್ವಹಣೆ ಮಾರ್ಗಸೂಚಿ ಅನ್ವಯ ರಾಜ್ಯದ ಪಾಲಿನ ಶೇ. 40ರಷ್ಟು ಅನುದಾನವನ್ನು ಬಳಸಿಕೊಂಡು ಬಡ ರೈತರಿಗೆ ಆರ್ಥಿಕ ಚೈತನ್ಯ ತುಂಬುವ ಕೆಲಸ ಮಾಡಬೇಕು. ಇನ್ನು ಬೆಳೆವಿಮೆ, ಬೆಳೆ ಪರಿಹಾರ ನೀಡಲು ವಿಮೆ ಕಂಪನಿಗಳಿಗೆ ತಕ್ಷಣ ಸೂಚನೆ ನೀಡುವ ಪ್ರಾಮಾಣಿಕ ಪ್ರಯತ್ನ ಮಾಡಬೇಕು. ಗ್ಯಾರಂಟಿ ಕಾರ್ಯಕ್ರಮಗಳಿಗೆ ಪ್ರತಿ ತಿಂಗಳು ಲಕ್ಷಾಂತರ ಕೋಟಿ ರೂ. ಹೊಂದಿಸುವ ಸರಕಾರಕ್ಕೆ ಬರ ನಿರ್ವಹಣೆ ಸವಾಲಾಗಿರುವುದು ವಿಪರ್ಯಾಸ.

## ಜಿಲ್ಲಾಡಳಿತ ಭವನದಲ್ಲಿರುವ 'ಮಾಹಿತಿ ಕೋಶ'ದ ಕುರಿತು ವಿಶೇಷ ಲೇಖನ

# ಸಾರ್ವಜನಿಕರಿಗೆ 'ಮಾಹಿತಿ ಕೋಶ'ದ ನೆರವು

ಗದಗ ಜಿಲ್ಲಾಡಳಿತ ಭವನದಲ್ಲಿ ಹೊಸದಾಗಿ ಪ್ರಾರಂಭಿಸಿದ ಮಾಹಿತಿ ಕೋಶ ಕಛೇರಿ ಕೆಲಸ–ಕಾರ್ಯಗಳ ಹಾಗೂ ವಿವಿಧ ಇಲಾಖೆಗಳ ಮಾಹಿತಿ ಒದಗಿಸುವಲ್ಲಿ ಸಾರ್ವಜನಿಕರಿಗೆ ನೆರವಾಗಿದೆ.

ಜಿಲ್ಲಾಡಳಿತ ಭವನದ ಮುಖ್ಯ ದ್ವಾರದ ಎದುರಿಗೆ ಸಹಾಯವಾಣಿ ಕೇಂದ್ರದ ಬಲ ಭಾಗದಲ್ಲಿ ಕಂಟ್ರೋಲ್ ರೂಮ್, ಎಡ ಭಾಗದಲ್ಲಿ ಮಾಹಿತಿ ಕೋಶ ತೆರೆಯಲಾಗಿದೆ. ಮಾಹಿತಿ ಕೋಶದ ಪಕ್ಕದಲ್ಲಿ ಐಇಳ ಸ್ಮಾರ್ಟ್ ಟಿವಿ ಅಳವಡಿಸಲಾಗಿದೆ. ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಾದ ಅನ್ನಭಾಗ್ಯ, ಸ್ತ್ರೀಶಕ್ತಿ ಯೋಜನೆ, ಗೃಹಲಕ್ಷ್ಮೀ ಯೋಜನೆ, ಗೃಹ ಜ್ಯೋತಿ ಯೋಜನೆ, ಯುವ ನಿಧಿ ಹೀಗೆ ಸರ್ಕಾರದ ಯೋಜನೆಗಳು ಹಾಗೂ ಸರ್ಕಾರದ ಭಿತ್ತಿ ಪತ್ರಗಳು, ಜಿಲ್ಲೆಯ ಪ್ರವಾಸಿ ಸ್ಥಳಗಳ ಬಗ್ಗೆ ವಿದ್ಯುನ್ಮಾನ ಚಿತ್ರಗಳೊಂದಿಗೆ ಜನರಿಗೆ ಪರಿಚಯಿಸಲಾಗುತ್ತದೆ.

ಜಿಲ್ಲೆಯ ಪ್ರವಾಸಿ ಸ್ಥಳಗಳಾದ ಲಕ್ಕುಂಡಿ, ಸಬರಮತಿ ಆಶ್ರಮ, ಬಸವೇಶ್ವರ ಪುತ್ಥಳಿ, ಬಿಂಕದಕಟ್ಟಿ ಮೃಗಾಲಯ, ಭೀಷ್ಮಕೆರೆ, ಮಾಗಡಿ ಕೆರೆಯ ಸಂಪೂರ್ಣ ಚಿತ್ರಣವನ್ನು ಡ್ರೋನ್ ಮೂಲಕ ಚಿತ್ರಿಸಲಾಗಿದೆ. ಜೊತೆಗೆ ಓದುಗ ಪ್ರಿಯರಿಗೆ ನೆರವಾಗುವಂತೆ ರಾಜ್ಯ ಸರ್ಕಾರದ ಯೋಜನೆಗಳ ಬಗ್ಗೆ ಕೈಪಿಡಿಗಳನ್ನು ಇರಿಸಲಾಗಿದೆ. ಜಿಲ್ಲಾಡಳಿತ ಭವನದಲ್ಲಿ ಇರುವ ಎಲ್ಲಾ ಕಛೇರಿಗಳ ಕೊಠಡಿಗಳ ಸಂಖ್ಯೆ ಹಾಗೂ ಅಧಿಕಾರಿಗಳ ದೂರವಾಣಿ ಸಂಖ್ಯೆಗಳನ್ನು ಸಹ ಮಾಹಿತಿ ಕೋಶದ ಹತ್ತಿರ ಕಲ್ಪಿಸಲಾಗಿದೆ. ಮಾಹಿತಿ ಕೋಶದ ಮುಂಭಾಗದಲ್ಲಿ ಜಿಲ್ಲಾಡಳಿತ ಭವನಕ್ಕೆ ಬರುವ ಜನರಿಗೆ ಕುಳಿತುಕೊಳ್ಳಲು ಸ್ಟೀಲ್ ಕುರ್ಚಿಗಳನ್ನು ಹಾಕಲಾಗಿದೆ. ಜನರಿಗೆ ಕುಡಿಯುವ ನೀರಿನ ವ್ಯವಸ್ಥೆಯನ್ನೂ ಸಹ ಕಲ್ಪಿಸಲಾಗಿದೆ.

ರಾಜ್ಯ ಕಾನೂನು ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಅವರ ಜನಪರ ಕಾರ್ಯಗಳ ಆಶಯದೊಂದಿಗೆ ಸಾಕಾರಗೊಂಡಿರುವ ಮಾಹಿತಿ ಕೇಂದ್ರವು ಆಗಸ್ಟ್ 15ರಂದು ಉದ್ಘಾಟನೆಗೊಂಡಿತು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರ ದಕ್ಷ ಆಡಳಿತದಿಂದಾಗಿ

ಮಾಹಿತಿ ಕೋಶದ ಮೂಲಕ ರಾಜ್ಯ ಸರ್ಕಾರದ ಯೋಜನೆಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡುವ ಕೆಲಸವನ್ನು ಜಿಲ್ಲಾಡಳಿತ ಭವನದಲ್ಲಿ ಸಹಾಯವಾಣಿ ಕೋಶದ ಪಕ್ಕದಲ್ಲಿ ಇರುವ ಮಾಹಿತಿ ಕೋಶದ ಎಲ್.ಇ.ಡಿ. ಟಿವಿಯಲ್ಲಿ ರಾಜ್ಯ ಸರ್ಕಾರದ ಯೋಜನೆಗಳು ಹಾಗೂ ಜಿಲ್ಲೆಯ ಪ್ರವಾಸಿ ತಾಣಗಳನ್ನು ವಿದ್ಯುನ್ಮಾದ ಮೂಲಕ ಚಿತ್ರಿಸಿ ಸಾರ್ವಜನಿಕರಿಗೆ ಮಾಹಿತಿ ನೀಡುತಿರುವುದು ಉಪಯುಕ್ತವಾಗಿದೆ.
**– ಸೌಮ್ಯ ಬೆಟಗೇರಿಮಠ.**
**ಅಂತೂರ ಬೆಂತೂರ.**



ಸಹಾಯವಾಣಿ ಕೋಶದಿಂದ ಸಾರ್ವಜನಿಕರಿಗೆ ಉಪಯುಕ್ತವಾದ ಮಾಹಿತಿ ದೊರೆಯುತ್ತಿದೆ. ಮೊದಲಿಗೆ ಜಿಲ್ಲಾಧಿಕಾರಿ ಹಾಗೂ ಯಾವುದೇ ಸರ್ಕಾರಿ ಕಛೇರಿಗೆ ತೆರಳಿ, ನಮ್ಮ ಕೆಲಸ–ಕಾರ್ಯವನ್ನು ಮಾಡುವುದಕ್ಕೆ ಹಾಗೂ ಸಂಪೂರ್ಣ ವಿಷಯ ತಿಳಿಯುವುದಕ್ಕೆ ಈ ಸಹಾಯವಾಣಿ ಕೇಂದ್ರ ಸಹಕಾರಿಯಾಗಿದೆ.
**– ಎಫ್.ಐ. ದೊಡ್ಡಮನಿ.**
**ವಕೀಲರು, ನರಗುಂದ.**

ಸಾರ್ವಜನಿಕರಿಗೆ ಸರಿಯಾದ ಸಮಯಕ್ಕೆ ಅವರ ಕೆಲಸ ಕಾರ್ಯಗಳು ಹಾಗೂ ಇಲಾಖೆಯ ಅರ್ಜಿಗಳನ್ನು ಸಹಾಯವಾಣಿ ಮಾಹಿತಿ ಕೋಶದ ಮೂಲಕ ಸಂಬಂಧಿಸಿದ ಕಛೇರಿಗೆ ತಲುಪಿಸುವ ಕೆಲಸವನ್ನು ಜಿಲ್ಲಾಡಳಿತ ಮಾಡಿರುವುದು ಉತ್ತಮ ಕಾರ್ಯ.
**– ವಿಜಯ, ನರಗುಂದ.**

ಸಹಾಯವಾಣಿ ಕೇಂದ್ರ ಪ್ರಾರಂಭವಾಗಿದ್ದರಿಂದ ಜಿಲ್ಲೆಯ ಸಾರ್ವಜನಿಕರಿಗೆ ತುಂಬಾ ಅನುಕೂಲವಾಗಿದೆ. ಸಹಾಯವಾಣಿ ಕೇಂದ್ರದಲ್ಲಿ ಮಾಹಿತಿ ಪಡೆದು ನಮಗೆ ಬೇಕಾದ ಕಛೇರಿಗೆ ತೆರಳಿ ಕೆಲಸವನ್ನು ಮುಗಿಸಿಕೊಂಡು ಮರಳಿ ಊರಿಗೆ ತೆರಳಲು ನಮಗೆ ಸಂತೋಷ ತಂದಿದೆ. ಹೀಗೆ ಜಿಲ್ಲಾಡಳಿತದಲ್ಲಿ ಸಾರ್ವಜನಿಕರಿಗೆ ಸರಿಯಾದ ಮಾಹಿತಿ ನೀಡುವ ಕೆಲಸವನ್ನು ಜಿಲ್ಲಾಡಳಿತ ಮಾಡುತ್ತಿರುವುದು ನಮಗೆ ಹೆಮ್ಮೆಯೆನಿಸುತ್ತದೆ.
**– ಅಶೋಕ ಯಮನಪ್ಪ ಹುಡಕೇರಿ.**
ಯಾವಗಲ್, ರೋಣ.



ಸಾರ್ವಜನಿಕರಿಗೆ ಸರ್ಕಾರದ ವಿವಿಧ ಇಲಾಖೆಗಳಲ್ಲಿರುವ ಮಾಹಿತಿಗಳು, ಅವುಗಳನ್ನು ಪಡೆಯಲು ಅರ್ಹರು ಸಲ್ಲಿಸಬೇಕಾದ ದಾಖಲೆಗಳ ವಿವರಗಳು ಈ ಮಾಹಿತಿ ಕೋಶದಲ್ಲಿ ಪ್ರದರ್ಶನವಾಗುತ್ತದೆ. ಇದನ್ನು ವೀಕ್ಷಿಸಿದ ಸಾರ್ವಜನಿಕರು ಸರ್ಕಾರದ ಸೌಲಭ್ಯಗಳನ್ನು ಸಂಬಂಧಿಸಿದ ಇಲಾಖೆಯಿಂದ ಪಡೆಯಲು ಅನುಕೂಲವಾಗಿದೆ. ಮಾಹಿತಿ ಕೋಶದಲ್ಲಿ ಮೂರು ಜನ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದು, ಕಛೇರಿಯ ಸಮಯದಲ್ಲಿ ಕಾರ್ಯನಿರ್ವಹಿಸುತ್ತದೆ.
**– ಮಂಜುನಾಥ ಹೊಸಳ್ಳಿ.**
ಪ್ರಶಿಕ್ಷಣಾರ್ಥಿ,
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಗದಗ.

# ಶ್ರದ್ಧಾ ಭಕ್ತಿಯಿಂದ ಜರುಗಿದ ಚಿದಂಬರೇಶ್ವರರ ಜಯಂತ್ಯುತ್ಸವ



**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಚಿಂದಂಬರೇಶ್ವರ ದೇವಸ್ಥಾನದಲ್ಲಿ ಸೋಮವಾರ ಚಿದಂಬರೇಶ್ವರರ 268ನೇ ಜಯಂತ್ಯುತ್ಸವವನ್ನು ಭಕ್ತರು ಶ್ರದ್ಧಾ ಭಕ್ತಿಯಿಂದ ನೆರವೇರಿಸಿದರು.

ವೇ.ಮೂ. ಭಾಲಚಂದ್ರ ಭಟ್ ಹುಲಮನಿ ಅವರ ನೇತೃತ್ವದಲ್ಲಿ ಕಳಾಹೋಮ, ಅನಂತಭಟ್ ಪೂಜಾರ ಮತ್ತು ಪ್ರಸನ್ನ ಜೋಶಿ ಅವರ ನೇತೃತ್ವದಲ್ಲಿ ರುದ್ರಾಭಿಷೇಕ ನೆರವೇರಿಸಲಾಯಿತು.

ಸುಮಂಗಲಿಯರಿಂದ ಶಿವಚಿದಂಬರೇಶ್ವರ ತೊಟ್ಟಿಲೋತ್ಸವ, ಸಾಂಪ್ರದಾಯಕ ಭಜನೆ, ಮಹಾಮಂಗಳಾರತಿ ನೆರವೇರಿದವು. ಈ ಸಂದರ್ಭದಲ್ಲಿ ದೇವಸ್ಥಾನದ ಧರ್ಮದರ್ಶಿ ಪ್ರಕಾಶ ಕುಲಕರ್ಣಿ ಮಾತನಾಡಿ, ನೂರಾರು ವರ್ಷಗಳ ಇತಿಹಾಸ ಹೊಂದಿರುವ ದೇವಸ್ಥಾನವನ್ನು ಹಿರಿಯರು, ದೇವಸ್ಥಾನದ ಭಕ್ತರು ಸೇರಿ ಜೀರ್ಣೋದ್ಧಾರಗೊಳಿಸಿ ಧಾರ್ಮಿಕ ಕಾರ್ಯಕ್ರಮಗಳನ್ನು ಕೈಗೊಳ್ಳುತ್ತಿರುವುದ ಶ್ಲಾಘನೀಯ ಎಂದರು.

ಬ್ರಾಹ್ಮಣ ಸಮಾಜದ ಹಿರಿಯರಾದ ವಿ.ಎಲ್. ಪೂಜಾರ ಮಾತನಾಡಿದರು. ದೇವಸ್ಥಾನದ ಕಾರ್ಯದರ್ಶಿ ಪ್ರಸನ್ನ ಕುಲಕರ್ಣಿ, ಗೋಪಾಲ ಪಡ್ನೀಸ್, ಜಯಕ್ಕ ಕಳ್ಳಿ, ಮಹಾದೇವಗೌಡ ಪಾಟೀಲ, ವೈ.ಎಚ್. ಮಾಚೇನಹಳ್ಳಿ, ನಾರಾಯಣಭಟ್ ಪುರಾಣಿಕ, ಶ್ರೀಕಾಂತ ಪೂಜಾರ, ನಾಗರಾಜ ಪೂಜಾರ, ರಮೇಶ ತೊರಗಲ್, ವೀರಭದ್ರಗೌಡ ಪಾಟೀಲ, ಮಹಾಲಿಂಗನಗೌಡ ಪಾಟೀಲ ಹಾಗೂ ಭಕ್ತರು ಪಾಲ್ಗೊಂಡಿದ್ದರು.

# ತರಬೇತಿ ಕಾರ್ಯಾಗಾರದ ಉದ್ಘಾಟನೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಪಠ್ಯೇತರ ಚಟುವಟಿಕೆಗಳನ್ನು ಹೊರತುಪಡಿಸಿ ಹೊಸ ತಂತ್ರಜ್ಞಾನದ ಅರಿವನ್ನು ಮೂಡಿಸುವ ಸಲುವಾಗಿ ಯೂಥ್ ಎಂಪವರ್‌ಮೆಂಟ್ ಪ್ರೊಗ್ರಾಮ್ ಐ.ಸಿ.ಟಿ ಅಕಾಡೆಮಿ ಸಹಯೋಗದೊಂದಿಗೆ ರೂರಲ್ ಇಂಜಿನಿಯರಿಂಗ್ ಕಾಲೇಜಿನ ಕಂಪ್ಯೂಟರ್ ಸೈನ್ಸ್ ಹಾಗೂ ಎಲೆಕ್ಟ್ರಾನಿಕ್ಸ್ & ಕಮ್ಯೂನಿಕೇಶನ್ ಇಂಜಿನಿಯರಿಂಗ್ ವಿಭಾಗದ ಕೊನೆಯ ವರ್ಷದ ವಿದ್ಯಾರ್ಥಿಗಳಿಗೆ ಮೈಕ್ರೋಸಾಫ್ಟ್ ಪವರ್ ಬಿ.ಐ. ಡಾಟಾ ಎನಾಲಾಯಿಸ್ಟ್ ವಿಷಯದ ಕುರಿತು ಹಮ್ಮಿಕೊಂಡ ತರಬೇತಿ ಕಾರ್ಯಾಗಾರದ ಉದ್ಘಾಟನೆ ನೆರವೇರಿತು.




ಕಾಲೇಜಿನ ಪ್ರಾಚಾರ್ಯ ಡಾ. ವಿ.ಎಮ್. ಪಾಟೀಲ ಅಧ್ಯಕ್ಷೀಯ ನುಡಿಗಳನ್ನಾಡಿದರು. ಶರಣಬಸವರಾಜ ಅಂಗಡಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಕಾರ್ಯಕ್ರಮ ಉದ್ಘಾಟಿಸಿದ ಸಂಸ್ಥೆಯ ಕಾರ್ಯದರ್ಶಿ ಸಚಿನ್ ಪಾಟೀಲ ಮಾತನಾಡಿ, 17 ದಿನಗಳ ಈ ತರಬೇತಿಯಲ್ಲಿ ಅನುಭವಿ ತರಬೇತುದಾರರಾದ ವೆಂಕಟೇಶ ರಾವ್ ನಡೆಸಿಕೊಡಲಿದ್ದು, ಅಭಯ್ ಧನಮೇಹರ ಮೈಕ್ರೋಸಾಫ್ಟ್ ಪವರ್ ಬಿ.ಐ. ಡಾಟಾ ಎನಾಲಾಯಿಸ್ಟ್ ವಿಷಯದ ಕುರಿತು ಪ್ರಾಯೋಗಿಕವಾಗಿ ತರಬೇತಿ ನೀಡುವರು ಎಂದರು.

ವರ್ಷಾ ಮುಂಡರಗಿ ಪ್ರಾರ್ಥನೆ ಹಾಡಿದರು. ಅಂಬರಯ್ಯಾ ಮಠ, ನಿತಿನ್ ದಾಸಪಲ್ಲಿ, ಪೃತ್ವಿರಾಜ ಸ್ವಾಗತಿಸಿದರು.

ಸಾತ್ವಿಕಾ ರೆಡ್ಡಿ, ರಶ್ಮಿ ಬಣಕಾರ ನಿರೂಪಿಸಿದರು. ಐ.ಸಿ.ಟಿ ಅಕಾಡೆಮಿಯ ಬೆಳಗಾವಿ ವಿಭಾಗದ ರಿಲೇಶನ್‌ಶಿಪ್ ಮ್ಯಾನೇಜರ್ ಪವನ ಚೊಳಚಗುಡ್ಡ, ಫೀಲ್ಡ್ ಪ್ರಾಜೆಕ್ಟ್ ಕೋಆರ್ಡಿನೇಟರ್ ಮೊಹಮ್ಮದ ತಾರೀಕ್, ಪ್ರವೀಣ ಗಸ್ತಿ, ಈ. ದಿನೇಶ ಕಾರ್ಯಾಗಾರ ಸಂಯೋಜನೆಗೆ ಸಹಕರಿಸಿದರು.

# ಸಹಕಾರಿ ಕ್ಷೇತ್ರದಲ್ಲಿ ಸುಧಾರಣೆಗೆ ಪ್ರಯತ್ನ: ಕೆ.ಎನ್. ರಾಜಣ್ಣ

**■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ–ಸುವರ್ಣಸೌಧ**

ಸಹಕಾರಿ ಲೆಕ್ಕ ಪರಿಶೋಧನಾ ಇಲಾಖೆಯಿಂದ ಸರ್ಕಾರಕ್ಕೆ ನಿರೀಕ್ಷಿತ ಆದಾಯ ಬರುವಂತೆ ಆಮೂಲಾಗ್ರ ಬದಲಾವಣೆ ತರಲು ಚಿಂತನೆ ನಡೆದಿದೆ ಎಂದು ಸಹಕಾರ ಸಚಿವ ಕೆ.ಎನ್. ರಾಜಣ್ಣ ಹೇಳಿದರು.

ರಾಜ್ಯದಲ್ಲಿ 1679 ಸಹಕಾರ ಸಂಘಗಳಲ್ಲಿ ಅವ್ಯವಹಾರ ನಡೆದಿದೆ ಎನ್ನುವ ಮಾಹಿತಿ ಇದೆ. ಸಹಕಾರಿ ಸಂಘಗಳ ಸ್ಥಿತಿಗತಿಯನ್ನು ಗಮನಿಸಿ ಸರ್ಕಾರವು ಯಾವ ರೀತಿಯ ಸುಧಾರಣಾ ವ್ಯವಸ್ಥೆ ರೂಪಿಸಿದೆ ಎನ್ನುವ ವಿಧಾನ ಪರಿಷತ್ತಿನ ಭಾರತಿ ಶೆಟ್ಟಿ ಅವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ಸಹಕಾರಿ ಕ್ಷೇತ್ರದಲ್ಲಿ ಸುಧಾರಣೆ ತರುವ ನಿಟ್ಟಿನಲ್ಲಿ ಎಲ್ಲಾ ರೀತಿಯ ಪ್ರಯತ್ನ ಮಾಡಲಾಗುತ್ತಿದೆ. ಇತ್ತೀಚಿಗೆ ಹಿರಿಯ ಸಹಕಾರಿಗಳೊಂದಿಗೆ ಸಭೆ ನಡೆಸಿ ಸಲಹೆ ಪಡೆಯಲಾಗಿದೆ.

ಸಹಕಾರಿ ಸಂಘಗಳಲ್ಲಿನ ಹಣ ದುರುಪಯೋಗ, ಅವ್ಯವಹಾರಕ್ಕೆ ಕಡಿವಾಣ ಹಾಕಲಾಗುವುದು ಎಂದು ಸಚಿವರು ತಿಳಿಸಿದರು.

ಸಹಕಾರಿ ಲೆಕ್ಕ ಪರಿಶೋಧನಾ ಇಲಾಖೆಯನ್ನು ಬಲಪಡಿಸಲು ನಾನಾ ಯೋಜನೆಗಳನ್ನು ರೂಪಿಸಲಾಗಿದೆ.

390 ಲೆಕ್ಕ ಪರಿಶೋಧಕರ ನೇಮಕಾತಿಗೆ ಪ್ರಸ್ತಾವನೆಯಿದ್ದು, ಪರಿಶೀಲನಾ ಹಂತದಲ್ಲಿದೆ. 20 ಜನ ಲೆಕ್ಕ ಪರಿಶೋಧಕರ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯು ಪ್ರಗತಿಯಲ್ಲಿದೆ. ಅನುಕಂಪದ ಆಧಾರದ ಮೇಲೆ ವಿವಿಧ 55 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ಎಂದು ಸಚಿವರು ತಿಳಿಸಿದರು.

# ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

ಸಮಾಜ ಕಲ್ಯಾಣ ಇಲಾಖೆಯ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮೂಲಕ 2023–24ನೇ ಸಾಲಿಗೆ ಭಾರತೀಯ ಸೇನೆ /ಭದ್ರತಾ ಪಡೆ/ರಾಜ್ಯ ಪೊಲೀಸ್ ಸೇವೆ ಸೇರಿದಂತೆ ಇತರೆ ಸಮವಸ್ತ್ರ ಸೇವೆಗಳಿಗೆ ಹಾಗೂ ಖಾಸಗಿ ಕಾರ್ಪೊರೇಟ್ ಸಂಸ್ಥೆಗಳಲ್ಲಿ ಲಭ್ಯವಿರುವ ಫ್ಲಿಪ್‌ಕಾರ್ಟ್, ಅರ್ಬನ್ ಕಂಪನಿ, ಓಲಾ, ಉಬರ್, ಸ್ವಿಗ್ಗಿ, ಝೊಮಾಟೋ, ಅಮೇಝಾನ್, ಗಿಗ್ ವರ್ಕರ್ ಉದ್ಯೋಗಗಳ ತರಬೇತಿಗೆ ಹಾಗೂ ಫ್ರೀ ಲಾನ್ಸರ್ (ಖಾಸಗಿ ಕ್ಷೇತ್ರ) ತರಬೇತಿಗೆ ಸೇರ ಬಯಸುವ ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಹೆಚ್ಚಿನ ವಿವರಗಳಿಗೆ ಇಲಾಖಾ ವೆಬ್ ಸೈಟ್ www.sw.kar.nic.in ನ್ನು ಸಂಪರ್ಕಿಸಬಹುದಾಗಿದೆ.

ಯುನಿಫಾರ್ಮಡ್ ಸರ್ವಿಸಸ್‌ಗೆ ಅರ್ಜಿ ಸಲ್ಲಿಸಲು ಡಿಸೆಂಬರ್ 10 ಕೊನೆಯ ದಿನವಾಗಿದ್ದು, ಗಿಗ್ ವರ್ಕ ಉದ್ಯೋಗಗಳ ತರಬೇತಿಗೆ ಅರ್ಜಿ ಸಲ್ಲಿಸಲು ಡಿಸೆಂಬರ್ 15 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಗದಗ/ಮುಂಡರಗಿ/ಶಿರಹಟ್ಟಿ/ರೋಣ/ನರಗುಂದ ಇವರಿಗೆ ಸಂಪರ್ಕಿಸಲು ತಿಳಿಸಿದೆ.

ಹಾಗೂ ದೂರವಾಣಿ ಸಂಖ್ಯೆ: 9482300400/ 9480843005/ 080–22207784, ಇ–ಮೇಲ್: helpswkar@gmail.com ಸಂಪರ್ಕಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್.ಎಸ್.ಪಿ. ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ 2023–24ನೇ ಸಾಲಿಗೆ ಹೊಸದಾಗಿ ಮತ್ತು ನವೀಕರಣಕ್ಕೆ 1 ರಿಂದ 8ನೇ ತರಗತಿ ವ್ಯಾಸಂಗ ಮಾಡುತ್ತಿರುವ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ ವರ್ಗದವರು ಎಸ್.ಎಸ್.ಪಿ. ವಿದ್ಯಾರ್ಥಿ ವೇತನಕ್ಕಾಗಿ https:ssp.postmatric.karnataka.gov.in/ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಆರಂಭಗೊಂಡಿದ್ದು, ಈ ಮೇಲ್ಕಂಡ ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ಆನ್‌ಲೈನ್ ಅರ್ಜಿ ಸಲ್ಲಿಸುವ ಕೊನೆಯ ದಿನವನ್ನು ಡಿಸೆಂಬರ್ 15 ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕ ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿ ಅಮಿತ್ ಬಿದರಿ ಆರ್, ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ವಿವರಗಳಿಗಾಗಿ ಮಾಹಿತಿ ಕೇಂದ್ರ ಗದಗ, ಶಿರಹಟ್ಟಿ–9591705863, ಮುಂಡರಗಿ–9916689778, ನರಗುಂದ–9901501170, ರೋಣ–9964490088 ಸಂಪರ್ಕಿಸಬಹುದಾಗಿದೆ.

# 2030ರೊಳಗೆ ಅಪೌಷ್ಠಿಕತೆ ನಿಯಂತ್ರಣ: ಸಚಿವ ದಿನೇಶ್ ಗುಂಡೂರಾವ್

**■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ–ಸುವರ್ಣಸೌಧ**

ಮಹಿಳೆಯರು ಮತ್ತು ಮಕ್ಕಳಲ್ಲಿರುವ ರಕ್ತಹೀನತೆ(ಅನೀಮಿಯಾ)ವನ್ನು 2030ರೊಳಗೆ ಸಂಪೂರ್ಣವಾಗಿ ನಿವಾರಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ವಿಧಾನಪರಿಷತ್ತಿನ ಶೂನ್ಯ ವೇಳೆಯಲ್ಲಿ ಸದಸ್ಯ ನಾಗರಾಜ್ ಅವರು ವಿಷಯ ಪ್ರಸ್ತಾಪಿಸಿ, ರಕ್ತಹೀನತೆ ಮತ್ತು ಅಪೌಷ್ಠಿಕತೆಯಿಂದ ಮಹಿಳೆಯರು ಮತ್ತು ಮಕ್ಕಳು ಬಳಲುತ್ತಿರುವ ಸಮಸ್ಯೆಗಳ ಕುರಿತು ಪ್ರಸ್ತಾಪಿಸಿದ ವಿಷಯಕ್ಕೆ ಪ್ರತಿಕ್ರಿಯಿಸಿದ ಸಚಿವರು, ರಾಜ್ಯದಲ್ಲಿ ಅನೀಮಿಯಾದಿಂದ ಬಳಲುತ್ತಿರುವ ಮಹಿಳೆಯರು ಮತ್ತು ಹದಿಹರೆಯದವರ ಸಂಖ್ಯೆ ಸುಮಾರು 2 ಕೋಟಿ ಎಂದು ಗುರುತಿಸಲಾಗಿದೆ. ಇದರ ನಿವಾರಣೆಗೆ 185 ಕೋಟಿ ರೂ. ವೆಚ್ಚದಲ್ಲಿ ಕಾರ್ಯಕ್ರಮ ರೂಪಿಸಲಾಗುತ್ತಿದ್ದು, 2030ರ ವೇಳೆಗೆ ರಾಜ್ಯದಲ್ಲಿ ಈ ಪ್ರಮಾಣದಲ್ಲಿ ಗಣನೀಯವಾಗಿ ಕಡಿಮೆಗೊಳಿಸುವ ಗುರಿ ಹೊಂದಲಾಗಿದೆ ಎಂದರು.

ರಾಜ್ಯದಲ್ಲಿ ಇತ್ತೀಚೆಗೆ ಬೆಳಕಿಗೆ ಬಂದ ಭ್ರೂಣ ಹತ್ಯೆ ಕುರಿತಂತೆ ಸದಸ್ಯ ಯು.ಬಿ. ವೆಂಕಟೇಶ್ ಪ್ರಸ್ತಾಪಿಸಿದರು. ಈ ಪ್ರಕರಣವನ್ನು ಈಗಾಗಲೇ ಸಿಓಡಿ ತನಿಖೆಗೆ ಆದೇಶಿಸಿದ್ದು, ಇದರಲ್ಲಿ ಭಾಗಿಯಾದ ಎಲ್ಲರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು.

# ಕೃಷಿ ಪಂಪ್‌ಸೆಟ್‌ಗಳಿಗೆ ನಿತ್ಯ 7 ಗಂಟೆಗಳ ಕಾಲ ತ್ರಿಫೇಸ್ ವಿದ್ಯುತ್

**■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ–ಸುವರ್ಣಸೌಧ**



ರಾಜ್ಯದ ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ಪ್ರಸ್ತುತ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ದಿನನಿತ್ಯ 7 ಗಂಟೆಗಳ ಕಾಲ ತ್ರಿಫೇಸ್ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ವಿಧಾನಪರಿಷತ್‌ನಲ್ಲಿ ಸದಸ್ಯ ಛಲವಾದಿ ನಾರಾಯಣಸ್ವಾಮಿ ಅವರು ಕೇಳಿದ ಪ್ರಶ್ನೆಗೆ ಇಂಧನ ಸಚಿವರ ಪರವಾಗಿ ಅವರು ಉತ್ತರಿಸಿದಪ್ರಿಯಾಂಕ್ ಖರ್ಗೆ, ರೈತರ ಪಂಪ್‌ಸೆಟ್‌ಗಳಿಗೆ 7 ಗಂಟೆಗಳ ಕಾಲ ತ್ರಿಫೇಸ್ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. ರಾಜ್ಯದ ವಿವಿಧ ಭಾಗಗಳಲ್ಲಿನ ಬೇಡಿಕೆಗಳ ಹಿನ್ನೆಲೆಯಲ್ಲಿ ಭತ್ತ ಮತ್ತು ಕಬ್ಬು ಬೆಳೆಗಳ ಕಟಾವು ಪೂರ್ವ ಅವಧಿಯಲ್ಲಿ 7 ಗಂಟೆಗಳಿಗೂ ಹೆಚ್ಚಿನ ಅವಧಿಗೆ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. ಕೆಲವು ಪ್ರದೇಶಗಳಲ್ಲಿ ಸ್ಥಳೀಯ ಅವಶ್ಯಕತೆಗೆ ತಕ್ಕಂತೆ ಹಗಲಿನಲ್ಲಿ 4 ಗಂಟೆಗಳು ಹಾಗೂ ರಾತ್ರಿ ವೇಳೆ 3 ಗಂಟೆಗಳು ಸೇರಿ 7 ಗಂಟೆಗಳ ಕಾಲ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ ಎಂದರು.

ಈ ವರ್ಷ ಬರಗಾಲ ಆವರಿಸಿರುವುದರಿಂದ ಕೃಷಿ ಪಂಪ್‌ಸೆಟ್‌ಗಳ ವಿದ್ಯುತ್ ಬಳಕೆ ಪ್ರಮಾಣ ದ್ವಿಗುಣವಾಗಿದೆ. ಲಭ್ಯ ಸಂಪನ್ಮೂಲಗಳಿಂದ ವಿದ್ಯುತ್ ಪಡೆದು ಸರಬರಾಜು ಮಾಡಲಾಗುತ್ತಿದೆ ಎಂದು ತಿಳಿಸಿದ ಸಚಿವ ಪ್ರಿಯಾಂಕ್ ಖರ್ಗೆ, ಕೆಲವು ಸಮಯಗಳಲ್ಲಿ ತಾಂತ್ರಿಕ ಕಾರಣಗಳಿಂದ ವಿದ್ಯುತ್ ಲಭ್ಯತೆ/ಉತ್ಪಾದನೆ ಕುಂಠಿತಗೊಂಡು ಸೀಮಿತ ಪ್ರಮಾಣದಲ್ಲಿ ವಿದ್ಯುತ್ ಸರಬರಾಜು ಮಾಡಿರುವುದನ್ನು ಇದೇ ಸಂದರ್ಭದಲ್ಲಿ ತಿಳಿಸಿದರು.

# ಮಲ್ಲಪ್ಪ ಬಾವಿಮನೆಯವರಿಗೆ ಸನ್ಮಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಜಿಲ್ಲಾಸ್ಪತ್ರೆಯ ಹೊರಗುತ್ತಿಗೆ ನೌಕರ ಮಲ್ಲಪ್ಪ ಬಾವಿಮನೆ ಅವರನ್ನು ಜೈ ಭೀಮ್ ಸಂಘರ್ಷ ಸಮಿತಿಯ ಗದಗ ಜಿಲ್ಲಾಧ್ಯಕ್ಷ ಗಣೇಶ ವಾಯ್. ಹುಬ್ಬಳ್ಳಿ ನೇತೃತ್ವದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ಮಾದಿಗ ಸಂಘರ್ಷ ಸಮಿತಿ ಗದಗ ಜಿಲ್ಲಾಧ್ಯಕ್ಷ ರಾಘವೇಂದ್ರ ಪರಾಪುರ, ಮಡಿವಾಳ ಸಮಾಜದ ಮುಖಂಡರಾದ ಕೃಷ್ಣಪ್ಪ ಮಡಿವಾಳ, ವಿಜಯ್ ಮಡಿವಾಳ, ಶಿವಪ್ಪ ಜಂಬಲದಲ್ಲಿ, ಜೈ ಭೀಮ ಸಂಘರ್ಷ ಸಮಿತಿಯ ಉಪಾಧ್ಯಕ್ಷ ಮಂಜುನಾಥ ಎಫ್. ತೌಜಲ್, ರೋಣ ತಾಲೂಕಾಧ್ಯಕ್ಷ ಬಸವರಾಜ ಬದಾಮಿ, ಅಲ್ಪಸಂಖ್ಯಾತರ ಘಟಕದ ಜಿಲ್ಲಾಧ್ಯಕ್ಷ ರಾಷ್ಟ್ರೀನ್ ಜೋಸೆಪ್, ಜಿಲ್ಲಾ ಉಪಾಧ್ಯಕ್ಷ ರಾಜೇಶ ವಿ.ಶೆಟ್ಟರ್, ಸಹ–ಕಾರ್ಯದರ್ಶಿ ಶಿವಣ್ಣ ಕಡಿವಾಲ, ಹೇಮಂತ ಹುಬ್ಬಳ್ಳಿ, ಯಶವಂತ ಹುಬ್ಬಳ್ಳಿ, ಚಾರು ಹೆಚ್.ರಾಮಗಿರಿ, ಕೃಷ್ಣಪ್ಪ ಮಡಿವಾಳರ ಉಪಸ್ಥಿತರಿದ್ದರು.

## ಅಡಿಕೆ ಎಲೆಚುಕ್ಕಿ ರೋಗ ನಿಯಂತ್ರಣಕ್ಕೆ ಕ್ರಮ



■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ

ರಾಜ್ಯದಲ್ಲಿ ಅಡಿಕೆ ಬೆಳೆಯಲ್ಲಿ ಕಂಡುಬರುತ್ತಿರುವ ಎಲೆ ಚುಕ್ಕಿ ರೋಗ ನಿಯಂತ್ರಣ ಕುರಿತಂತೆ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ವತಿಯಿಂದ ಸಂಶೋಧನೆ ಕೈಗೊಳ್ಳಲು 43.61 ಲಕ್ಷ ರೂ.ಗಳ ಅನುದಾನವನ್ನು ಒದಗಿಸಲಾಗಿದ್ದು, ರೋಗ ನಿಯಂತ್ರಣದ ಕುರಿತು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ ಎಂದು ಕೃಷಿ ಸಚಿವ ಚಲುವರಾಯಸ್ವಾಮಿ ಹೇಳಿದರು.

ಮಂಗಳವಾರ ವಿಧನ ಪರಿಷತ್‌ನಲ್ಲಿ ಸದಸ್ಯ ಎಸ್. ರುದ್ರೇಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆ 180ಕ್ಕೆ, ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕಾ ಸಚಿವರ ಪರವಾಗಿ ಅವರು ಉತ್ತರಿಸಿದರು.

ಪ್ರಸಕ್ತ ಸಾಲಿನಲ್ಲಿ ಎಲೆಚುಕ್ಕಿ ರೋಗ ಭಾಧಿತ ರೈತರಿಗೆ ಪ್ರತಿ ಹೆಕ್ಟೇರ್‌ಗೆ 4 ಸಾವಿರ ರೂ.ಗಳಂತೆ ಗರಿಷ್ಠ 1.5 ಹೆಕ್ಟೆರ್‌ವರೆಗೆ ಮಿತಿಗೊಳಿಸಿ ಪ್ರತಿ ಫಲಾನುಭವಿಗೆ ಗರಿಷ್ಠ 6 ಸಾವಿರ ರೂ. ಮೊತ್ತದ ಸಸ್ಯ ಸಂರಕ್ಷಣಾ ಔಷಧಿಗಳನ್ನು ವಿತರಿಸಿ ಅನುಷ್ಠಾನಗೊಳಿಸಲಾಗುತ್ತಿದ್ದು, ಒಟ್ಟು 6250 ಹೆಕ್ಟೆರ್ ಪ್ರದೇಶಕ್ಕೆ ಒಟ್ಟು 250 ಲಕ್ಷ ರೂ. ಅನುದಾನ ವಿನಿಯೋಗಿಸಲಾಗಿದೆ ಎಂದರು.

ರಾಜ್ಯದಲ್ಲಿ ಅಡಿಕೆ ಬೆಳೆಯುವ ಜಿಲ್ಲೆಗಳಲ್ಲಿ ಒಟ್ಟು 53977 ಹೆಕ್ಟೇರ್ ಪ್ರದೇಶದಲ್ಲಿ ಹಾನಿಯಾಗಿರುವುದನ್ನು ಅಂದಾಜಿಸಲಾಗಿದ್ದು, ಅದರ ನಿಯಂತ್ರಣ ಹಾಗೂ ಸಂಶೋಧನೆಗಾಗಿ 21.50 ಕೋಟಿ ರೂಗಳ ಅನುದಾನದ ಅವಶ್ಯಕತೆಯಿದೆ. ಹೆಚ್ಚುವರಿ ಅನುದಾನದಕ್ಕಾಗಿ ಆರ್ಥಿಕ ಇಲಾಖೆಯನ್ನು ಕೋರಲಾಗಿದೆ ಎಂದರು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರಿಗೆ ಸಮಾಜ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ಪಂಗಡ ಇಲಾಖೆಗೆ ಒಳಪಡುವ ಎಲ್ಲಾ ನಿಗಮಗಳಿಂದ 2023-24ನೇ ಸಾಲಿಗೆ ಅನುಷ್ಠಾನಗೊಳಿಸಲಾಗುತ್ತಿರುವ ನಿಗಮದ ವಿವಿಧ ಯೋಜನೆಗಳಾದ ಸ್ವಯಂ ಉದ್ಯೋಗ, ನೇರ ಸಾಲ, ಉದ್ಯಮ ಶೀಲತಾ ಅಭಿವೃದ್ಧಿ, ಮೈಕ್ರೋ ಕ್ರೆಡಿಟ್ ( ಪ್ರೇರಣಾ), ಭೂ ಒಡೆತನ, ಗಂಗಾ ಕಲ್ಯಾಣ ಯೋಜನೆಗಳಡಿ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಡಿಸೆಂಬರ್ 15 ರವರಗೆ ಮುಂದೂಡಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಡಾ. ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ಗದಗ ಜಿಲ್ಲಾಡಳಿತ ಭವನ 1ನೇ ಮಹಡಿ ರೂಮ್ ನಂ 122/5 ಫೋನ್-08372239557 ಗೆ ಸಂಪರ್ಕಿಸಬಹುದಾಗಿದೆ.

### ಶರಣೆ ದಾನಮ್ಮತಾಯಿ ಪುರಾಣ ಪ್ರವಚನ ಮಾಲಿಕೆಗೆ ಚಾಲನೆ ನೀಡಿದ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್

## ಪುರಾಣ-ಪ್ರವಚನಗಳು ಧರ್ಮ ಜಾಗೃತಿಯ ಮಾರ್ಗ

■ವಿಜಯಸಾಕ್ಷಿ ಸುದ್ದಿ, ಗದಗ

ಧಾರ್ಮಿಕ ಆಚರಣೆಯಿಂದ, ಪುರಾಣ-ಪ್ರವಚನ ಆಲಿಸುವುದರಿಂದ ಮನಸ್ಸಿಗೆ ನೆಮ್ಮದಿ ಪ್ರಾಪ್ತವಾಗುತ್ತದೆ. ಸಂಸ್ಕಾರ, ಸಂಸ್ಕೃತಿಗಳು ಮುಂದಿನ ಪೀಳಿಗೆಗೆ ವರ್ಗಾವಣೆಗೊಳ್ಳಬೇಕು ಎಂದು ಗದಗ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಹೇಳಿದರು.

ಅವರು ಸೋಮವಾರ ಗದಗ ಬಸವೇಶ್ವರ ನಗರದ ವೀರಭದ್ರೇಶ್ವರ ಕಲ್ಯಾಣ ಮಂಟಪದಲ್ಲಿ ದಾನೇಶ್ವರಿ ಮಹಿಳಾ ಮಂಡಳ, ವೀರಭದ್ರ ದೇವಸ್ಥಾನ ಟ್ರಸ್ಟ್ ಕಮಿಟಿ, ಶಂಕರಲಿಂಗ ದೇವಸ್ಥಾನ ಟ್ರಸ್ಟ್ ಕಮಿಟಿ ಆಶ್ರಯದಲ್ಲಿ ಡಿ. 12ರವರೆಗೆ ನಡೆಯಲಿರುವ ಶರಣೆ ದಾನಮ್ಮತಾಯಿ ಪುರಾಣ ಪ್ರವಚನ ಮಾಲಿಕೆಗೆ ಜ್ಯೋತಿ ಬೆಳಗಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಶರಣೆ ದಾನಮ್ಮತಾಯಿಯ ಮಹಿಮೆ, ಪವಾಡಗಳು ಅದ್ಭುತ. ಸಮಾಜ ಜಾಗೃತಿ, ಧರ್ಮ ಜಾಗೃತಿ ಮಾಡಿದ ಶರಣೆ ಆರಾಧ್ಯ ದೇವಿಯಾಗಿದ್ದಾಳೆ. ಇಂತಹ ಮಹಾನ್ ಶರಣೆಯ ಕುರಿತು ಇಲ್ಲಿನ ದಾನೇಶ್ವರಿ ಮಹಿಳಾ ಮಂಡಳ ಕಳೆದ 17 ವರ್ಷಗಳಿಂದ ದಾನಮ್ಮತಾಯಿಯ ಪುರಾಣ-ಪ್ರವಚನ ಏರ್ಪಡಿಸುತ್ತ ಬಂದಿರುವದು ಧರ್ಮ ಜಾಗೃತಿಯ ಮಾರ್ಗವಾಗಿದೆ ಎಂದರು.

ನಗರಸಭಾ ಸದಸ್ಯ ಚಂದ್ರಶೇಖರ ತಡಸದ ಮಾತನಾಡಿ, ನಾಡಿಗೆ ಸಾಮೂಹಿಕ




ವಿವಾಹದ ಪರಂಪರೆಯನ್ನು ಹಾಕಿಕೊಟ್ಟ ಶ್ರೇಯಸ್ಸು ಶರಣೆ ದಾನಮ್ಮತಾಯಿಗೆ ಸಲ್ಲುತ್ತದೆ. ಇಂತಹ ತಾಯಿ ಬಗ್ಗೆ ಕಳೆದ 17 ವರ್ಷಗಳಿಂದ ದಾನೇಶ್ವರಿ ಮಹಿಳಾ ಮಂಡಳ ಪುರಾಣ ನಡೆಸಿಕೊಂಡು ಬಂದಿದೆ. ಉಳವಿ ಚನ್ನಬಸವೇಶ್ವರ ದೇವಸ್ಥಾನದ ಶಾಖಾ ಮಠ ಇಲ್ಲಿದೆ, ಕಲಬುರ್ಗಿ ಶರಣ ಬಸವೇಶ್ವರ ಪುರಾಣ ಕಳೆದ 45 ವರ್ಷಗಳಿಂದ ಸಾಗಿ ಬಂದಿದೆ. ಇನ್ನೊಂದು ವಿಶೇಷವೆಂದರೆ ಶಹಪೂರಪೇಟೆ (ಬಸವೇಶ್ವರ ನಗರ) ನಾಮಕರಣಗೊಂಡು ಮಾರ್ಚ್ 2024ಕ್ಕೆ ಸರಿಯಾಗಿ 200 ವರ್ಷ ಪೂರೈಸಲಿದೆ. ಈ ಕುರಿತು ವಿಶೇಷ ಕಾರ್ಯಕ್ರಮ ರೂಪಿಸಲಾಗುತ್ತಿದೆ ಎಂದರು.

ಪೂಜ್ಯ ಪುಟ್ಟರಾಜ ಕವಿ ಗವಾಯಿಗಳು ವಿರಚಿತ ದಾನಮ್ಮತಾಯಿ ಪುರಾಣ ಪ್ರವಚನಕ್ಕೆ ಪಂ.ಎಂ.ಕಲ್ಲಿನಾಥಶಾಸ್ತ್ರಿ ಅಡ್ನೂರ ಅವರು ಆರಂಭಿಕ ಪೀಠಿಕೆ ಹಾಕಿದರು. ಮೃತ್ಯುಂಜಯ ಹಿರೇಮಠ, ಮಲ್ಲಿಕಾರ್ಜುನ ಕೊಡಗಾನೂರ ಸಂಗೀತ ಸಾಥ್ ನೀಡಿದರು.

ಸಮಾರಂಭದಲ್ಲಿ ಗದಗ-ಬೆಟಗೇರಿ ನಗರಸಭೆಯ ಸ್ಥಾಯಿ ಸಮಿತಿಯ ಅಧ್ಯಕ್ಷ ಅನಿಲ ಅಬ್ಬಿಗೇರಿ ದಂಪತಿ ಸೇರಿದಂತೆ ಪ್ರಸಾದ ಸೇವೆ ಕೈಗೊಂಡ ದಾನಿಗಳನ್ನು, ಗಣ್ಯರನ್ನು ಸನ್ಮಾನಿಸಲಾಯಿತು.

ವೇದಿಕೆಯ ಮೇಲೆ ಟ್ರಸ್ಟಿಗಳಾದ ಶಿವಪುತ್ರಪ್ಪ ಬೇವಿನಮರದ, ರಾಚಪ್ಪ ಮಿಣಜಗಿ, ಪ್ರದೀಪ ಕೊಡೇಕಲ್ಲ, ಸುಧಾ ಕೆರೂರ, ವಿಜಯಲಕ್ಷ್ಮೀ ಕಾತರಕಿ ಉಪಸ್ಥಿತರಿದ್ದರು. ಶೋಭಾ ಗುಗ್ಗರಿ ಸ್ವಾಗತಿಸಿದರು. ಶೈಲಾ ಕೊಡೇಕಲ್ಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಜ್ಯೋತಿ ಹೆರಲಗಿ ನಿರೂಪಿಸಿದರು. ದೀಪಾ ಬೇವಿನಮರದ ವಂದಿಸಿದರು.

ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ದಯಪಾಲಿಸಿದ ಅಡ್ನೂರಿನ ಪೂಜ್ಯ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು, ಮನಸ್ಸಿನಲ್ಲಿರುವ ಮಲಿನತೆಯನ್ನು ತೊಳೆದುಕೊಳ್ಳಲು ಪುರಾಣ-ಪ್ರವಚನ ಅವಶ್ಯ. ಎಲ್ಲರೊಳಗಿನ ಕಲ್ಮಶ ದೂರವಾಗಿ ಭಕ್ತಿ ನೆಲೆಸಲಿ. ಒಳ್ಳೆ ಸಂಸ್ಕಾರ, ಪ್ರಜ್ಞಾವಂತಿಕೆಯುಳ್ಳ ತಾವು ಸಂಕಲ್ಪಿಸಿಕೊಂಡಿರುವ ದಾನಮ್ಮದೇವಿಯ ಪಲ್ಲಕ್ಕಿ, ತೇರು ನಿರ್ಮಾಣದ ಕೆಲಸ ಯಶಸ್ವಿಯಾಗಲಿ ಎಂದರು.

ಕಾರ್ಯಕ್ರಮದಲ್ಲಿ ಸುರೇಖಾ ಪಿಳ್ಳಿ, ವಿಜಯಲಕ್ಷ್ಮೀ ಕಾತರಕಿ, ಶೋಭಾ ಗುಗ್ಗರಿ ಸೇರಿದಂತೆ ದಾನೇಶ್ವರಿ ಮಹಿಳಾ ಮಂಡಳದ ಪದಾಧಿಕಾರಿಗಳು, ಸದಸ್ಯರು, ಶಿವಪುತ್ರಪ್ಪ ಶಿವಶಿಂಪಿಗೇರ, ಶಿವಬಸಪ್ಪ ಯಂಡಿಗೇರಿ, ಬಸವರಾಜ ಕಾಡಪ್ಪನವರ, ಶಿವಕುಮಾರ ಬೇವಿನಮರದ, ಈರಣ್ಣ ಕಾತರಕಿ, ಸುರೇಶ ಸಿರಿಗಣ್ಣವರ, ವೀರೇಶ ಮುನವಳ್ಳಿ, ಶಂಭು ಕಾರಕಟ್ಟಿ, ಬಸವರಾಜ ರಾಮನಕೊಪ್ಪ, ಜಗದೀಶ ಯಚ್ಚಲಗಾರ, ಪ್ರದೀಪ ಕೊಡೇಕಲ್ ಮುಂತಾದವರಿದ್ದರು.

## ಗವಿಸಿದ್ಧೇಶ್ವರ ಮಠದಲ್ಲಿ ಕಾರ್ತಿಕ ದೀಪೋತ್ಸವ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಆದರಹಳ್ಳಿ ಗ್ರಾಮದ ಗವಿಸಿದ್ಧೇಶ್ವರ ಮಠದ 2ನೇ ವರ್ಷದ ಕಾರ್ತಿಕೋತ್ಸವದ ಅಂಗವಾಗಿ ದೇವಸ್ಥಾನದಲ್ಲಿ ಸೋಮವಾರ ಕಾರ್ತಿಕೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಸಂಜೆ ದೇವಸ್ಥಾನದ ಮುಂದಿನ ಆವರಣದಲ್ಲಿ ಸಾಲಾಗಿ ಜೋಡಿಸಲಾಗಿದ್ದ ಮಣ್ಣಿನ ಹಣತೆಗಳನ್ನು ಹತ್ತಿಮತ್ತೂರು ವಿರಕ್ತಮಠದ ಶ್ರೀ ನಿಜಗುಣ ಶಿವಯೋಗಿ ಸ್ವಾಮೀಜಿ ಹಾಗೂ ಗವಿಸಿದ್ದೇಶ್ವರಮಠದ ಶ್ರೀ ಕುಮಾರ್ ಮಹಾರಾಜರು ಬೆಳಗಿಸಿ ಕಾರ್ತಿಕೋತ್ಸವಕ್ಕೆ ಚಾಲನೆ ನೀಡಿದರು. ಕಾರ್ತಿಕೋತ್ಸವದ ಅಂಗವಾಗಿ ಬಾರಿ ಸವಾಲ್ ಭಜನಾ ಏರ್ಪಡಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಚೆನ್ನಪ್ಪ ಲಮಾಣಿ, ಮಾನು ಲಮಾಣಿ, ಷಣ್ಮುಖ ವಡ್ಡರ, ಶಂಕರಗೌಡ ಪಾಟೀಲ, ಮಹಾಂತಗೌಡ ಪಾಟೀಲ, ಅಲ್ಲಾಭಕ್ಷ ವಾಲಿಕಾರ, ಲಕ್ಷ್ಮಣ ವಡ್ಡರ, ಶಾರವ್ವ ಕಾರ್ಬಾರಿ, ಪರಶುರಾಮ ನಾಯಕ, ಶಾಂತಪ್ಪ ನಾಯಕ, ಭೋಜಪ್ಪ ನಾಯಕ, ಉಮೇಶ ನಾಯಕ, ನರಸಪ್ಪ ಡಾವ, ಮಂಜಪ್ಪ ಸುಣಗಾರ, ನಾಗೇಶ್ ಲಮಾಣಿ, ಗೋಪಿ ನಾಯಕ, ಗಣೇಶ ಲಮಾಣಿ, ಮಾಂತೇಶ್ ಲಮಾಣಿ ಸೇರಿದಂತೆ ಆದರಹಳ್ಳಿ ಶ್ರೀಮಠದ ಸಕಲ ಸದ್ಭಕ್ತರು ಪಾಲ್ಗೊಂಡಿದ್ದರು.

## ಜಿ.ವಿ. ಬಳಗಾನೂರರ ಸೇವೆ ಶ್ಲಾಘನೀಯ



■ವಿಜಯಸಾಕ್ಷಿ ಸುದ್ದಿ,ಮುಳಗುಂದ

ಜನ ಸೇವೆಯಲ್ಲಿ ಪ್ರಾಮಾಣಿಕತೆಯನ್ನು ರೂಢಿಸಿಕೊಳ್ಳಬೇಕು ಎಂದು ಸಾಹಿತಿ ಬಿ.ಎಂ. ಹರಪನಹಳ್ಳಿ ಹೇಳಿದರು.

ಅವರು ಪಟ್ಟಣದ ಲಕ್ಷ್ಮೀ ವೆಂಕಟೇಶ್ವರ ಕಲ್ಯಾಣ ಮಂದಿರಲ್ಲಿ ಕರ್ನಾಟಕ ರಾಜ್ಯ ಸಹಕಾರಿ ಸಂಘದಿಂದ 2023ನೇ ಸಾಲಿನಲ್ಲಿ ಸಹಕಾರ ರತ್ನ ಪ್ರಶಸ್ತಿ ಪಡೆದ ಜಿ.ವಿ. ಬಳಗಾನೂರ ಅವರನ್ನು ಬ್ರಾಹ್ಮಣ ಸೇವಾ ಸಂಘದ ವತಿಯಿಂದ ಸನ್ಮಾನಿಸಿ ಮಾತನಾಡಿದರು.

ಎಲ್ಲರ ಸಹಾಯ-ಸಹಕಾರದಿಂದ ಜನ ಸೇವೆಯಲ್ಲಿ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿದರೆ ಪ್ರಶಸ್ತಿಗಳು ತಾವಾಗಿಯೇ ನಮ್ಮನ್ನು ಹುಡುಕಿಕೊಂಡು ಬರುತ್ತವೆ. ಈ ನಿಟ್ಟಿನಲ್ಲಿ ಜಿ.ವಿ. ಬಳಗಾನೂರ ಅವರ ಸೇವೆ ಅತ್ಯಂತ ಶ್ರೇಷ್ಠವಾದದ್ದು. ಇಂತಹ ಮಹನೀಯರನ್ನು ಗುರುತಿಸಿ ಪ್ರಶಸ್ತಿ ನೀಡಿರುವುದು ಶ್ಲಾಘನಿಯ ಎಂದರು.

ಜಿ.ವಿ. ಬಳಗಾನೂರ ಸನ್ಮಾನ ಸ್ವೀಕರಿಸಿ ಮಾತನಾಡಿ, ನನ್ನನ್ನು ಮುಳಗುಂದ ಪಟ್ಟಣದ ರೈತರು, ಸಾರ್ವಜನಿಕರು ಪಿ.ಎಲ್.ಡಿ ಬ್ಯಾಂಕ್ ನಿರ್ದೇಶಕನನ್ನಾಗಿ ಮಾಡಿದ್ದರಿಂದ 30 ವರ್ಷಗಳ ಕಾಲ ಸೇವೆ ಸಲ್ಲಿಸಲು ಸಾಧ್ಯವಾಗಿದ್ದು, ಈ ಪ್ರಶಸ್ತಿ ಮುಳಗುಂದದ ಜನತೆಗೆ ಸಲ್ಲುತ್ತದೆ ಎಂದರು.

ಪಿ.ಕೆ. ದೊಡ್ಡವಾಡ, ಬಿ.ಎಂ. ಹರಪನಹಳ್ಳಿ, ಎನ್.ಆರ್. ಐಯಂಜಿ, ಮುರಳಿ ದುರ್ಗಿಗುಡಿ, ಬಿ.ಟಿ. ಹುಲ್ಲೂರ, ರಾಜಣ್ಣ ಕುಲಕರ್ಣಿ, ರಾಘು ಕುಂಬಾರಗೇರಿ, ನಾಗರಾಜ ಸುಬ್ಬಣ್ಣವರ, ಕಿರಣ ಕುಲಕರ್ಣಿ, ಗುಂಡಪ್ಪ ಸುಬ್ಬಣ್ಣವರ, ನಾಗರಾಜ ಮುನವಳ್ಳಿ, ಸುರೇಂದ್ರ ನಾಯ್ಕ, ಶ್ರೀಕಾಂತ ಗುಡಿ ಮುಂತಾದವರು ಉಪಸ್ಥಿತರಿದ್ದರು.

## ಪ್ರವಾಸೋದ್ಯಮಕ್ಕೆ 339.54 ಕೋಟಿ ರೂ. ಮೀಸಲು

▶▶ಮೊದಲನೇ ಪುಟದಿಂದ

ಮೂಡಬಿದರಿ ಕ್ಷೇತ್ರದ ಕಲಕಕೆರೆ ನಿಸರ್ಗಧಾಮ ಮತ್ತು ರಾಣಿ ಅಬ್ಬಕ್ಕ ಸಂಸ್ಕೃತಿ ಗ್ರಾಮಕ್ಕೆ ರೂ. 1 ಕೋಟಿ, ಶಿರ್ತಾಡಿ ಗ್ರಾಮದ ಪ್ರವಾಸಿ ತಾಣ ಕೊಣಜಿಕಲ್ಲು ಗುಡ್ಡದ ಅಭಿವೃದ್ಧಿಗೆ ರೂ.50 ಲಕ್ಷ, ಮೂಡಬಿದರಿಯ ಸಾವಿರ ಕಂಬದ ಬಸದಿ ಹಾಗೂ ಇತರೆ ಜೈನ ಮಂದಿರಗಳ ಅಭಿವೃದ್ಧಿಗೆ ರೂ.50 ಲಕ್ಷ ಬಿಡುಗಡೆ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆಗಳು ಸಲ್ಲಿಕೆಯಾಗಿವೆ ಎಂದು ತಿಳಿಸಿದರು.

ಸಕಲೇಶಪುರ ಶಾಸಕ ಸಿಮೆಂಟ್ ಮಂಜು ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಸಕಲೇಶಪುರ ತಾಲೂಕಿನ ಮರಗುಂದ, ಮಂಜರಾಬಾದ್ ಕೋಟೆ, ಮೂಕನಮನೆ ಜಲಪಾತ, ಅಬ್ಬಿ ಜಲಪಾತ, ಬಿಸಿಲೆ ಘಾಟ್, ಪಾಂಡವರ ಬೆಟ್ಟ, ಮೂರ್ಕಣ್ ಬೆಟ್ಟ, ಜೇನುಕಲ್ಲು ಬೆಟ್ಟ, ಗುಡ್ಡ ಬಸವಣ್ಣ, ಪಾಟ್ಲೆಬೆಟ್ಟ ಪ್ರದೇಶಗಳನ್ನು ಪ್ರವಾಸಿ ತಾಣಗಳಾಗಿ ಅಭಿವೃದ್ಧಿಪಡಿಸಲು ಗುರುತಿಸಲಾಗಿದೆ ಎಂದು ತಿಳಿಸಿದರು.

ಮಳವಳ್ಳಿ ಶಾಸಕ ಪಿ.ಎಂ. ನರೇಂದ್ರಸ್ವಾಮಿ ಪ್ರಶ್ನೆಗೆ ಉತ್ತರಿಸಿದ ಸಚಿವ ಹೆಚ್.ಕೆ.ಪಾಟೀಲ್, ಯಲ್ಲಮ್ಮನಗುಡ್ಡ, ಮಧುಗಿರಿ, ಅಂಜನಾದ್ರಿ, ನಂದಿಬೆಟ್ಟ ಹಾಗೂ ಗಗನ ಚುಕ್ಕಿಯಲ್ಲಿ ಕೇಬಲ್ ಕಾರ್ ಪ್ರಾರಂಭಿಸುವುದಕ್ಕೆ ಪರಿಶೀಲನೆ ಕಾರ್ಯ ನಡೆಸಲಾಗುತ್ತಿದೆ ಎಂದು ಸ್ಪಷ್ಟಪಡಿಸಿದರು. 2023-24ನೇ ಸಾಲಿನ ಆಯವ್ಯಯದಲ್ಲಿ ಪ್ರವಾಸೋದ್ಯಮ ಇಲಾಖೆಗೆ ಸರ್ಕಾರದಿಂದ ರೂ.339.54 ಕೋಟಿ ಮೀಸಲಿರಿಸಲಾಗಿದೆ. ಈ ಪೈಕಿ ರೂ.90 ಕೋಟಿಯನ್ನು ಬಂಡವಾಳ ವೆಚ್ಚಗಳ ಲೆಕ್ಕಶೀರ್ಷಿಕೆಗಳಡಿ ಈಗಾಗಲೇ ಒದಗಿಸಲಾಗಿದೆ ಎಂದರು.

ರಾಜ್ಯದ ಕರಾವಳಿ ಜಿಲ್ಲೆಗಳು ಕಡಲು ಕಿನಾರೆ, ಧಾರ್ಮಿಕ ಹಾಗೂ ಆರೋಗ್ಯ ಕ್ಷೇತ್ರದಲ್ಲಿ ನಾಡಿಗೆ ಹೆಸರಾಗಿವೆ. ಈ ಮೂರು ಅಂಶಗಳನ್ನು ಮುಂದಿಟ್ಟುಕೊಂಡು, ಕರಾವಳಿ ಅಭಿವೃದ್ಧಿ ಮಂಡಳಿಯಲ್ಲಿ ಪ್ರವಾಸೋದ್ಯಮದ ಅಭಿವೃದ್ಧಿ ಯೋಜನೆ ರೂಪಿಸುವಂತೆ ಸಭಾಧ್ಯಕ್ಷ ಯು.ಟಿ. ಖಾದರ್ ಸರ್ಕಾರಕ್ಕೆ ಸೂಚನೆ ನೀಡಿದರು.

## ಡಾ. ಅಶೋಕ ದುರಗಣ್ಣವರರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಹುಲಕೋಟಿ ಗ್ರಾಮದಲ್ಲಿ ಜನಿಸಿ, ಅನೇಕ ರೀತಿಯ ಕಷ್ಟ ಕಾರ್ಪಣ್ಯಗಳನ್ನು ಎದುರಿಸಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ ಬೆಳಗಾವಿಯಲ್ಲಿ ಸುಮಾರು 30 ವರ್ಷ ಸೇವೆ ಸಲ್ಲಿಸಿ ನಿವೃತ್ತರಾದ ಡಾ. ಅಶೋಕ ದುರಗಣ್ಣವರ ಅವರನ್ನು ಸನ್ಮಾನಿಸಿ, ನಿವೃತ್ತ ಜೀವನಕ್ಕೆ ಶುಭ ಕೋರಲಾಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕೆ.ಎಸ್.ಡಬ್ಲ್ಯೂ.ಇ. ಬೆಳಗಾವಿಯ ಉಪನಿರ್ದೇಶಕಿ ಸುಧಾ ದೇವರಡ್ಡಿ ಮಾತನಾಡಿ, ಡಾ. ಅಶೋಕ ದುರಗಣ್ಣವರ ನಿಸ್ವಾರ್ಥ ಸೇವೆಯನ್ನು ಮಾಡುವುದರ ಮೂಲಕ ಸಾವಿರಾರು ರೈತರ ಬಾಳಿಗೆ ಬೆಳಕಾಗಿದ್ದಾರೆ ಎಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಡಾ. ಶಶಿಧರ ನಾಡಗೌಡ ಮಾತನಾಡಿ, ಡಾ. ದುರಗಣ್ಣವರ ನಮ್ಮ ಜಿಲ್ಲೆಯಲ್ಲಿ ಮನೆ ಮಾತಾಗಿರುವ ಅಧಿಕಾರಿಗಳಾಗಿದ್ದು, ಇವರ ನಿವೃತ್ತ ಜೀವನ ಸುಖಕರವಾಗಿರಲಿ ಎಂದು ಹಾರೈಸಿದರು.

ಸಮಾರಂಭದಲ್ಲಿ ಪಾಲ್ಗೊಂಡ ಡಾ. ಎನ್.ವ್ಹಿ. ಅಚಲಕರ, ಡಾ. ಅಶೋಕ ಕೋಳಾ, ಡಾ. ಎಸ್.ವ್ಹಿ. ಅರಗಂಜಿ, ಡಾ. ಎಸ್. ಕೆ. ಕೋವಳ್ಳಿ, ಡಾ. ಅರವಿಂದ ಸಬನೀಶ ಮುಂತಾದವರು ಡಾ. ಅಶೋಕ ದುರಗಣ್ಣವರ ಕುರಿತು ಮೆಚ್ಚುಗೆಯ ನುಡಿಗಳನ್ನಾಡಿದರು. ಸಮಾರಂಭದಲ್ಲಿ ಡಾ. ಎಂ.ಬಿ. ಗೋಮಡಿ, ಡಾ. ಶ್ರೀಕಾಂತ ಗಣವಿ ಬೈಲಹೊಂಗಲ, ಡಾ. ಬದ್ರಿಪ್ರಸಾದ ದೇಶಪಾಂಡೆ, ಡಾ. ವೆಂಕಟೇಶ ನಾಟೇಕರ, ಡಾ. ಚಂದ್ರು ಧರಣೆಪ್ಪಗೌಡರ ಉಪಸ್ಥಿತರಿದ್ದರು.

ಕಲ್ಲಣ್ಣವರ, ಹುಲಿನಾಯ್ಕರ ಡಾವಣಗೇರಿ, ರಾಮಚಂದ್ರ ಜೋಗಿನ ಗದಗ ಕಾರ್ಯಕ್ರಮ ನಿರೂಪಣೆಯನ್ನು ಹಾಗೂ ವಂದನಾರ್ಪಣೆಯನ್ನು ಡಾ. ಎಚ್.ಬಿ. ಸಣ್ಣಕ್ಕಿ ನಿರ್ವಹಿಸಿದರು.

## ನೈಸ್ ಸಂಸ್ಥೆಗೆ ನೀಡಿದ್ದ 554 ಎಕರೆ ಜಮೀನು ಶೀಘ್ರದಲ್ಲಿ ವಾಪಸ್

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ

ಕರ್ನಾಟಕ ಕೈಗಾರಿಕ ಪ್ರದೇಶಾಭಿವೃದ್ಧಿ ಮಂಡಳಿಯು ನೈಸ್ ಸಂಸ್ಥೆಗೆ ನೀಡಿದ್ದ 554 ಎಕರೆ ಹೆಚ್ಚುವರಿ ಜಮೀನನ್ನು ಶೀಘ್ರವಾಗಿ ಹಿಂಪಡೆಯುವ ಕುರಿತಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವ ಶರಣ ಬಸಪ್ಪ ದರ್ಶನಾಪುರ ಹೇಳಿದರು.

ವಿಧಾನ ಪರಿಷತ್‌ನಲ್ಲಿ ಮಂಗಳವಾರ ಸದಸ್ಯ ಎಸ್.ಮುನಿರಾಜು ಗೌಡ ಪಿಎಂ ಕೇಳಿದ ಚುಕ್ಕೆ ಗುರುತಿನ ಪ್ರಶ್ನೆಗೆ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವರ ಪರವಾಗಿ ಅವರು ಉತ್ತರಿಸಿದರು.

ಬಿಎಂಐಸಿಪಿ ಯೋಜನೆಗಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳ ಪೈಕಿ 554 ಎಕರೆ ಹೆಚ್ಚುವರಿ ಜಮೀನುಗಳನ್ನು ಹಿಂಪಡೆಯುವ ಕುರಿತಂತೆ, ಹೆಚ್ಚುವರಿಯಾಗಿ ಸ್ವಾಧೀನಪಡಿಸಿಕೊಂಡಿರುವ ಜಮೀನುಗಳನ್ನು ಗುರುತಿಸಿ ಸರ್ವೇ ನಂ.ಗಳೊಂದಿಗೆ ವಿವರವಾದ ಮಾಹಿತಿ ಸಲ್ಲಿಸುವಂತೆ ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ (ದಕ್ಷಿಣ) ಇವರಿಗೆ ಪತ್ರದ ಮೂಲಕ ತಿಳಿಸಲಾಗಿದೆ. ಇವರಿಂದ ಮಾಹಿತಿ/ಸ್ಪಷ್ಟವಾದ ವರದಿ ಪಡೆದು ಹೆಚ್ಚುವರಿ ಭೂಮಿಯನ್ನು ಹಿಂಪಡೆಯಲು ನಿಯಮಾನುಸಾರ ಪರಿಶೀಲಿಸಿ ಕ್ರಮ ವಹಿಸಲಾಗುವುದು ಎಂದರು.

## ವಿಡಿಎಸ್ ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ 'ವೆಜಿಟೇಬಲ್ಸ್ ಡೇ'



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿದ್ಯಾದಾನ ಸಮಿತಿಯ ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ 'ತರಕಾರಿಗಳ ದಿನ'ವನ್ನು ಆಚರಿಸಲಾಯಿತು. ಶಾಲೆಯ 1 ಮತ್ತು 2ನೇ ತರಗತಿಯ ವಿದ್ಯಾರ್ಥಿಗಳು ಮಣ್ಣಿನ ಮಾದರಿಯಲ್ಲಿ ವಿವಿಧ ಬಗೆಯ ತರಕಾರಿಗಳನ್ನು ತಯಾರಿಸಿ, ಶಾಲೆಯಲ್ಲಿ ಅಣಕು ಸಂತೆ ಮಾರುಕಟ್ಟೆ ಏರ್ಪಡಿಸಿ, ಉಳಿದ ತರಗತಿಯ ವಿದ್ಯಾರ್ಥಿಗಳಿಗೆ ತರಕಾರಿಗಳ ಪ್ರದಶನ ಮಾಡಿ, ತಕ್ಕಡಿ ಹಿಡಿದು ಗ್ರಾಹಕರನ್ನು ಕೂಗುತ್ತಾ ಅಣಕು ಮಾರುಕಟ್ಟೆಯ ಮೂಲಕ ತರಕಾರಿಗಳನ್ನು ಪ್ರದರ್ಶಿಸಿದರು. ಕೆಲವು ವಿದ್ಯಾರ್ಥಿಗಳು ತರಕಾರಿಗಳ ವೇಷವನ್ನು ಧರಿಸಿಕೊಂಡು ತಮ್ಮ ತಮ್ಮ ತರಕಾರಿಗಳನ್ನು ಗ್ರಾಹಕರಿಗೆ ಮಾರಾಟ ಮಾಡಿದರು.

ಶಾಲೆಯ ಮುಖ್ಯೋ ಪಾಧ್ಯಾಯ ರಾದ ಎಂ.ಆರ್. ಡೊಳ್ಳಿನ ಮಾತನಾಡಿ, ಇಂತಹ ಪ್ರದರ್ಶನಗಳನ್ನು ಏರ್ಪಡಿಸುವುದರಿಂದ ಮಕ್ಕಳಿಗೆ ಸ್ಪರ್ಧಾ ಮನೋಭಾವನೆ, ತರಕಾರಿಗಳ ಸೇವನೆಯಿಂದ ಮಾನವನ ಆರೋಗ್ಯಕ್ಕೆ ಲಭಿಸುವ ಅನುಕೂಲ, ತರಕಾರಿಗಳನ್ನು ಬೆಳೆಯುವ ಕಾರ್ಯವೈಖರಿಯ ಮಾಹಿತಿ, ವ್ಯಾಪಾರದಲ್ಲಿ ಲಾಭ-ನಷ್ಟ, ಸ್ವಂತ ಉದ್ಯೋಗ, ಜವಾಬ್ದಾರಿ ಹಾಗೂ ವಿವಿಧ ತರಕಾರಿಗಳ ಪರಿಚಯ ಮತ್ತು ಅವುಗಳ ಗುಣಗಳ ಬಗ್ಗೆ ವಿದ್ಯಾರ್ಥಿಗಳು ತಿಳಿದುಕೊಳ್ಳಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ಮಕ್ಕಳಿಗೆ ಮಾರ್ಗದರ್ಶನ ನೀಡಿದ ಶಾಲೆಯ ಶಿಕ್ಷಕಿಯರಾದ ಸುಮಂಗಲಾ ಆಸಂಗಿ, ವೀಣಾ ನಾಯಕ, ರೇಣುಕಾ ವೆಂಕಟಾಪುರ ಹಾಗೂ ವಿದ್ಯಾರ್ಥಿಗಳನ್ನು ಎಂ.ಆರ್. ಡೊಳ್ಳಿನ ಅಭಿನಂದಿಸಿದರು. ಕಾರ್ಯಕ್ರಮದಲ್ಲಿ ಶಾಲೆಯ ಎಲ್ಲಾ ಶಿಕ್ಷಕ/ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಸ್ಥಗಿತಗೊಂಡಿರುವ ಬಸ್ ಸೇವೆ ಪುನಃ ಪ್ರಾರಂಭಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಿಎಂ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರಕಾರದ ಗ್ಯಾರಂಟಿಗಳಲ್ಲಿ ಪ್ರಮುಖವಾದ ಶಕ್ತಿ ಯೋಜನೆ ಜನರ ವಿಶ್ವಾಸವನ್ನು ಕಳೆದುಕೊಳ್ಳುತ್ತಿದೆ. ಗದಗ ದಿಂದ ರೋಣ-ಬೆಂಗಳೂರು, ಸವದತ್ತಿ, ಮುಂಬೈ ಸೇರಿದಂತೆ ಹಲವು ಮಾರ್ಗಗಳಿಗೆ ತೆರಳುವ ಬಸ್‌ಗಳ ಸೇವೆಯನ್ನು ರಾಜ್ಯ ಸರಕಾರ ಕೈಬಿಟ್ಟಿರುವದು ಖಂಡನೀಯ ಎಂದು ಬಿಜೆಪಿ



ಗ್ರಾಮೀಣ ಉಪಾಧ್ಯಕ್ಷ ಭದ್ರೇಶ ಕೂಸಲಾಪೂರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ರಾಜ್ಯ ಸರಕಾರ ರೋಣ-ಬೆಂಗಳೂರು, ಸವದತ್ತಿ-ಬಾಂಬೆ ಸೇರಿದಂತೆ ಹಲವು ಮಾರ್ಗಗಳ ಬಸ್ ಸೇವೆಯನ್ನು ಸ್ಥಗಿತಗೊಳಿಸುವ ಮೂಲಕ ಮಹಿಳೆಯರ ವಿಶ್ವಾಸಕ್ಕೆ ದ್ರೋಹವೆಸಗುತ್ತಿದೆ. ಈ ಬಗ್ಗೆ ಸಚಿವ ಎಚ್.ಕೆ. ಪಾಟೀಲರು ರಾಜ್ಯ ಸರಕಾರದ ಗಮನ ಸೆಳೆದು ಸ್ಥಗಿತಗೊಂಡಿರುವ ಬಸ್ ಸೇವೆಗಳನ್ನು ಪುನಃ ಪ್ರಾರಂಭಿಸಬೇಕೆಂದು ಒತ್ತಾಯಿಸಿದ್ದಾರೆ.

## ವಿಧಾನ ಪರಿಷತ್‌ನಲ್ಲಿ ಸಂತಾಪ ನಿರ್ಣಯ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ

ವಿಧಾನ ಮಂಡಲದ ಚಳಿಗಾಲದ ಅಧಿವೇಶನದ 2ನೇ ದಿನವಾದ ಮಂಗಳವಾರ ವಿಧಾನಪರಿಷತ್ತಿನಲ್ಲಿ, ಇತ್ತೀಚೆಗೆ ಜಮ್ಮು ಕಾಶ್ಮೀರದ ರಜೌರಿ ಜಿಲ್ಲೆಯಲ್ಲಿ ಸೇನಾಪಡೆ ಮತ್ತು ಉಗ್ರರ ನಡುವೆ ನಡೆದ ಗುಂಡಿನ ಚಕಮಕಿಯಲ್ಲಿ ಹುತಾತ್ಮರಾದ ಕ್ಯಾಪ್ಟನ್ ಎಂ.ವಿ. ಪ್ರಾಂಜಲ್, ಕ್ಯಾಪ್ಟನ್ ಶುಬಂ ಗುಪ್ತಾ, ಹವಾಲ್ದಾರ್ ಅಬ್ದುಲ್ ಮಜಿಕ್, ಲಾನ್ಸ್ ನಾಯ್ಕ್ ಸಂಜಯ್ ಬಿಸ್ಟ್ ಮತ್ತು ಸಚಿನ್ ಲಾರ ಅವರುಗಳಿಗೆ ಮತ್ತು ಐತಿಹಾಸಿಕ ಮೈಸೂರು ದಸರಾದ ಕೇಂದ್ರ ಬಿಂದುವಾಗಿದ್ದ ಗಜರಾಜ ವೀರ ಅರ್ಜುನನ ನಿಧನಕ್ಕೆ ಸಂತಾಪ ಸೂಚಿಸಲಾಯಿತು.ಸಭಾ ನಾಯಕ, ಸಚಿವ ಬೋಸರಾಜು ಹಾಗೂ ಶಾಸಕ ಕೋಟ ಶ್ರೀನಿವಾಸ ಪೂಜಾರಿ ಸಂತಾಪ ವ್ಯಕ್ತಪಡಿಸಿದರು. ನಂತರ ಮೃತರ ಗೌರವಾರ್ಥ ಒಂದು ನಿಮಿಷ ಮೌನ ಆಚರಿಸಲಾಯಿತು.

## ನ್ಯಾಷನಲ್ ಫೆಲೋಶಿಪ್ ಅವಾರ್ಡ್‌ಗೆ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಭಗವಾನ್ ಬುದ್ಧ, ಜ್ಯೋತಿಬಾ ಫುಲೆ, ಸಾವಿತ್ರಿಬಾಯಿ ಫುಲೆ ಹಾಗೂ ಡಾ. ಬಿ.ಆರ್. ಅಂಬೇಡ್ಕರ ನ್ಯಾಷನಲ್ ಫೆಲೋಶಿಪ್ ಅವಾರ್ಡ್‌ಗೆ ತಾಲೂಕಿನ ಐವರು ಗಣ್ಯರನ್ನು ಆಯ್ಕೆ ಮಾಡಲಾಗಿದೆ ಎಂದು ಭಾರತೀಯ ದಲಿತ ಸಾಹಿತ್ಯ ಅಕಾಡೆಮಿಯ ಜಿಲ್ಲಾ ಮುಖಂಡ ರವಿ ಗಡೇದವರ ಹೇಳಿದರು.

ಈ ಕುರಿತು ಅಕಾಡೆಮಿಯ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂಬೇಡ್ಕರ ಹಾಗೂ ಫುಲೆ ಮತ್ತು ಬುದ್ಧನ ವಿಚಾರಧಾರೆಗಳನ್ನು ಅಳವಡಿಸಿಕೊಂಡು ಸಮಾಜದಲ್ಲಿ ಸೇವೆ ಮಾಡುತ್ತಿರುವ ಗಣ್ಯರನ್ನು ಗುರುತಿಸಿ ಕಳೆದ 39 ವರ್ಷಗಳಿಂದ ಡಿಸೆಂಬರ್ ತಿಂಗಳಲ್ಲಿ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ನಡೆಯುತ್ತಾ ಬಂದಿದೆ.

ಈ ಬಾರಿ, ಡಿ.10ರಂದು ದೆಹಲಿಯ ಮುರಾರಿ ಕ್ಯಾಂಪ್‌ನಲ್ಲಿ ನಡೆಯುತ್ತಿರುವ ಬರಹಗಾರರ ಮತ್ತು ಸಾಹಿತ್ಯಾಸಕ್ತರ ದಿನಾಚರಣೆಯಲ್ಲಿ ಗಜೇಂದ್ರಗಡದ ಪುರಸಭೆ ವಿಪಕ್ಷ ನಾಯಕ ಮುರ್ತುಜಾ ಡಾಲಾಯತ್, ಡಿ.ಕೆ. ಶಿವಕುಮಾರ ಅಭಿಮಾನಿಗಳ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಚನ್ನಿ, ಡಿಎಸ್‌ಎಸ್ ಜಿಲ್ಲಾ ಸಂಚಾಲಕ ಶರಣು ಪೂಜಾರ, ಪತ್ರಕರ್ತ ಶಿವಕುಮಾರ ಶಶಿಮಠ ಹಾಗೂ ಬಸವ ಬ್ರಿಗೇಡ್ ರಾಜ್ಯ ಸಂಚಾಲಕ ಮಂಜುನಾಥ ಹೂಗಾರ ಅವರಿಗೆ ಡಾ.ಬಾಬಾಸಾಹೇಬ ಅಂಬೇಡ್ಕರ ನ್ಯಾಷನಲ್ ಫೆಲೋಶಿಪ್ ಅವಾರ್ಡ್ ಪ್ರದಾನ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದರು.

### ವಿಧಾನಸಭಾ ಅಧಿವೇಶನದ ಪ್ರಶ್ನೋತ್ತರ ವೇಳೆಯಲ್ಲಿ ಕಾರ್ಮಿಕ ಸಚಿವ ಸಂತೋಷ್ ಲಾಡ್

# ಸೆಸ್ ಹಣದಲ್ಲಿ ಕಾರ್ಮಿಕ ಕಲ್ಯಾಣಕ್ಕೆ ಚಿಂತನೆ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ

ರಾಜ್ಯದಲ್ಲಿನ ನೇಕಾರರು ಹಾಗೂ ಟೈಲರಿಂಗ್ ಸೇರಿದಂತೆ ಅಸಂಘಟಿತ ವಲಯದ ಹಲವು ಕಾರ್ಮಿಕರಿಗೆ ವಿಶೇಷ ಸಾಮಾಜಿಕ ಭದ್ರತಾ ಯೋಜನೆಗಳನ್ನು ಜಾರಿ ಮಾಡುವುದಾಗಿ ಕಾರ್ಮಿಕ ಸಚಿವ ಸಂತೋಷ್ ಲಾಡ್ ಭರವಸೆ ನೀಡಿದರು.

ಬೆಳಗಾವಿಯ ಸುವರ್ಣಸೌಧದಲ್ಲಿ ಮಂಗಳವಾರದ ವಿಧಾನಸಭಾ ಅಧಿವೇಶನದ ಪ್ರಶ್ನೋತ್ತರ ವೇಳೆಯಲ್ಲಿ ತೆರದಾಳ ಶಾಸಕ ಸಿದ್ದು ಸವದಿ ಹಾಗೂ ಕಾಪು ಶಾಸಕ ಗುರ್ಮೆ ಸುರೇಶ್ ಶೆಟ್ಟಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ಪ್ರತಿ ನಿರ್ಮಾಣ ಕಾಮಗಾರಿಗೆ ಶೇ.1ರಷ್ಟು ಸೆಸ್ ವಿಧಿಸಲಾಗುತ್ತಿದೆ. ಇದರ ಅಡಿ ಸಂಗ್ರಹವಾದ ಹಣದಲ್ಲಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯು ಹಲವು ಸಾಮಾಜಿಕ ಭದ್ರತಾ ಯೋಜನೆಗಳನ್ನು ಕಟ್ಟಡ ಕಾರ್ಮಿಕರಿಗೆ ಜಾರಿ ಮಾಡಿದೆ. ಈ ಯೋಜನೆಗಳನ್ನು ನೇಕಾರರು ಹಾಗೂ ಟೈಲರಿಂಗ್ ಸೇರಿದಂತೆ ಇತರೆ ಯಾವುದೇ ಅಸಂಘಟಿತ ಕಾರ್ಮಿಕರಿಗೆ ವಿಸ್ತರಿಸಲು ಬರುವುದಿಲ್ಲ.

ರಾಜ್ಯದಲ್ಲಿ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಇದ್ದು, ಮಂಡಳಿಯು ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರು, ಕಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕರು ಸೇರಿದ 11 ಅಸಂಘಟಿತ ಕಾರ್ಮಿಕರಿಗೆ ಉಚಿತವಾಗಿ ನೋಂದಣಿ ಮಾಡಿಕೊಂಡು, ಗುರುತಿನ ಚೀಟಿ ನೀಡುತ್ತಿದೆ. ಇ-ಶ್ರಮ್ ಪೋರ್ಟಲ್‌ನಲ್ಲಿಯೂ



379 ವಿಧದ ಅಸಂಘಟಿತ ಕಾರ್ಮಿಕರನ್ನು ಉಚಿತವಾಗಿ ನೋಂದಣಿ ಮಾಡಲಾಗುತ್ತಿದೆ ಎಂದರು.

ರಾಜ್ಯದ ಗಾರ್ಮೆಂಟ್ ಸಂಸ್ಥೆಗಳಲ್ಲಿ ಟೈಲರಿಂಗ್ ವೃತ್ತಿ ಮಾಡುತ್ತಿರುವವರಿಗೆ ಉದ್ಯೋಗಿಯ ಸಂಬಳದ ನಿರ್ದಿಷ್ಟ ಶೇಕಡಾವಾರು ಮೊತ್ತ ಹಾಗೂ ಸಂಸ್ಥೆಯ ಅಷ್ಟೇ ಮೊತ್ತವನ್ನು ಒಟ್ಟು ಮಾಡಿ ಭವಿಷ್ಯ ನಿಧಿಗೆ ಕೊಡುಗೆ ನೀಡುತ್ತಿದ್ದಾರೆ. ಈ ಭವಿಷ್ಯ ನಿಧಿಯನ್ನು

> ನಿರ್ಮಾಣ ಕ್ಷೇತ್ರದ ಸೆಸ್ ಮಾದರಿಯಂತೆ ಗಾರ್ಮೆಂಟ್, ವಾಹನ ತಯಾರಿಕೆ, ಸಾರಿಗೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಶೇ.1ರಷ್ಟು ಸೆಸ್ ಸಂಗ್ರಹಿಸಲು ಚಿಂತನೆ ನಡೆಸಲಾಗುತ್ತಿದೆ. ಈ ಸೆಸ್‌ನಿಂದ ಸಂಗ್ರಹವಾದ ಹಣದಲ್ಲಿ ಆಯಾ ಕ್ಷೇತ್ರಗಳಲ್ಲಿ ತೊಡಗಿರುವ ಕಾರ್ಮಿಕರಿಗೆ ಯೋಜನೆಗಳನ್ನು ರೂಪಿಸಲಾಗುವುದು ಎಂದು ಕಾರ್ಮಿಕ ಸಚಿವ ಸಂತೋಷ್.ಎಸ್. ಲಾಡ್ ಈ ಸಂದರ್ಭದಲ್ಲಿ ತಿಳಿಸಿದರು.

ಉದ್ಯೋಗಿಯ ರಾಜೀನಾಮೆ, ನಿವೃತ್ತಿ, ಅನಾರೋಗ್ಯ, ಮದುವೆ, ಶಿಕ್ಷಣ, ನಿವೇಶನ ಖರೀದಿ ಮತ್ತು ಮನೆ ನಿರ್ಮಾಣ ಮುಂತಾದ ಉದ್ದೇಶಗಳಿಗೆ ಹಿಂಪಡೆಯಲು ಅವಕಾಶ ನೀಡಲಾಗಿದೆ. ಆದರೆ ಮನೆಯಲ್ಲಿ ಅಥವಾ ಸಣ್ಣ ಪುಟ್ಟ ಅಂಗಡಿಗಳಲ್ಲಿ ಟೈಲರಿಂಗ್ ವೃತ್ತಿ ಮಾಡುತ್ತಿರುವವರಿಗೆ ಭವಿಷ್ಯ ನಿಧಿಯ ಸೌಲಭ್ಯ ಇಲ್ಲ.

ರಾಜ್ಯಾದ್ಯಂತ ಅಸಂಘಟಿತ ವಲಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ 7,280,44 ಟೈಲರಿಂಗ್ ವೃತ್ತಿ ನಿರತ ಕಾರ್ಮಿಕರು ಇದ್ದಾರೆ. ಇವರಿಗೆ ಪ್ರಧಾನಮಂತ್ರಿ ಸುರಕ್ಷಾ ಭೀಮಾ ಯೋಜನೆ ಇದೆ. ಇದು ಅಪಘಾತ ವಿಮೆಯಾಗಿದ್ದು, ಕಾರ್ಮಿಕರಿಗೆ ಸಂಕಷ್ಟದಲ್ಲಿ ನೆರವಾಗಲಿದೆ. ಪ್ರಧಾನಮಂತ್ರಿ ಶ್ರಮಯೋಗಿ ಮಾನ್-ಧನ್ ಯೋಜನೆಯಡಿ 60 ವರ್ಷ ಪೂರೈಸಿದ ಅಸಂಘಟಿತ ಕಾರ್ಮಿಕರು ಮಾಸಿಕ 3 ಸಾವಿರ ರೂ.ಗಳ ನಿಶ್ಚಿತ ಪಿಂಚಣಿ ಪಡೆಯಬಹುದಾಗಿದೆ. ಮುಂದಿನ ವರ್ಷದಲ್ಲಿ ರಾಜ್ಯ ಸರ್ಕಾರದಿಂದ ನೇಕಾರರು ಹಾಗೂ ಟೈಲರಿಂಗ್ ವೃತ್ತಿಯಲ್ಲಿ ತೊಡಗಿದವರಿಗೆ ವಿಶೇಷ ಸಾಮಾಜಿಕ ಭದ್ರತಾ ಯೋಜನೆಗಳನ್ನು ಜಾರಿ ಮಾಡಲಾಗುವುದು ಎಂದು ಪುನರುಚ್ಚರಿಸಿದರು.

### ಸಮಯಕ್ಕೊದಗದ ಸಾರಿಗೆ ಇಲಾಖೆಯ ಬಸ್ । ವಿದ್ಯಾರ್ಥಿಗಳಿಗೆ ತರಗತಿಗೆ ತೆರಳಲು ಸಮಸ್ಯೆ

# ಜಕ್ಕಲಿಯಲ್ಲಿ ಬಸ್ ತಡೆದು ಪ್ರತಿಭಟನೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸರಿಯಾದ ಸಮಯಕ್ಕೆ ಬಸ್‌ಗಳು ಬರುತ್ತಿಲ್ಲ ಎಂದು ಆರೋಪಿಸಿ ಸಮೀಪದ ಜಕ್ಕಲಿ ಗ್ರಾಮಸ್ಥರು ಹಾಗೂ ವಿದ್ಯಾರ್ಥಿಗಳು ಸೋಮವಾರ ಮುಂಜಾನೆ 2-3ಗಂಟೆಗಳ ಕಾಲ ರೋಣ ಸಾರಿಗೆ ಘಟಕದ 5 ಬಸ್‌ಗಳನ್ನು ತಡೆದು ದಿಢೀರ್ ಪ್ರತಿಭಟನೆ ನಡೆಸಿದರು.



ಶಾಲಾ-ಕಾಲೇಜು ಸಮಯಕ್ಕೆ ಸರಿಯಾಗಿ ಬಸ್ ಬಾರದಿರುವ ಕಾರಣದಿಂದ ಅಸಮಾಧಾನಗೊಂಡ ವಿದ್ಯಾರ್ಥಿಗಳು ಬಸ್ ಸಂಚಾರ ತಡೆದು ಪ್ರತಿಭಟನೆಗೆ ಮುಂದಾದರು. ನಿತ್ಯ ಮುಂಜಾನೆ 8 ಗಂಟೆಗೆ ಬರಬೇಕಾದ ಬಸ್‌ಗಳು 9 ಗಂಟೆಯಾದರೂ ಬರುತ್ತಿಲ್ಲ. ಇದರಿಂದ ಶಾಲಾ-ಕಾಲೇಜುಗಳಿಗೆ ತೆರಳಲು ತೊಂದರೆಯಾಗುತ್ತಿದ್ದು, ಶಾಲೆ ಆರಂಭವಾಗಿ ಒಂದು ಗಂಟೆ ಬಳಿಕ ವಿದ್ಯಾರ್ಥಿಗಳು ಶಾಲೆಗೆ ಹೋಗಬೇಕಾದ ಸ್ಥಿತಿ ಇದೆ. ರೋಣ ಸಾರಿಗೆ ಘಟಕದ ಅಧಿಕಾರಿಗಳು ನಮ್ಮ ಸಮಸ್ಯೆಗೆ ಸ್ಪಂದಿಸುತ್ತಿಲ್ಲ ಎಂದು ವಿದ್ಯಾರ್ಥಿಗಳು ಆಕ್ರೋಶ ವ್ಯಕ್ತಪಡಿಸಿದರು.

ರೋಣದಿಂದಲೇ ಜಕ್ಕಲಿ ಮಾರ್ಗವಾಗಿ ಬರುವ ಬಸ್‌ಗಳು ವಿದ್ಯಾರ್ಥಿಗಳನ್ನು ತುಂಬಿಕೊಂಡು ಬರುತ್ತಿವೆ. ನಮಗೆ ಬಸ್‌ನಲ್ಲಿ ನಿಂತು ಹೋಗಲೂ ಸಾಧ್ಯವಾಗುತ್ತಿಲ್ಲ ಎಂದು ಕೆಲ ವಿದ್ಯಾರ್ಥಿಗಳು ತಮ್ಮ ಅಳಲು ತೋಡಿಕೊಂಡರು. ಪ್ರತಿದಿನ ಬಸ್ ಬಾರದಿರುವ ಹಿನ್ನೆಲೆಯಲ್ಲಿ ಬಸ್ ಪಾಸ್ ಇದ್ದರೂ ನಡೆದುಕೊಂಡು ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದರು.

> ರೋಣ ಸಾರಿಗೆಯ ಅಧಿಕಾರಿ, ನಾಳೆಯಿಂದಲೇ ಸಮಯಕ್ಕೆ ಸರಿಯಾಗಿ ಬಸ್ ಬಿಡುವ ವ್ಯವಸ್ಥೆ ಮಾಡುತ್ತೇವೆ ಅಲ್ಲದೆ, ಮುಂದೆ ಹೀಗಾಗದಂತೆ ನೋಡಿಕೊಳ್ಳುತ್ತೇವೆ ಎಂದು ಭರವಸೆ ನೀಡಿದ ಬಳಿಕ ವಿದ್ಯಾರ್ಥಿಗಳು ಪ್ರತಿಭಟನೆಯನ್ನು ಕೈಬಿಟ್ಟು ಬಸ್ ಹತ್ತಿದರು.

ರೋಣ ಸಾರಿಗೆ ಘಟಕದ ವ್ಯವಸ್ಥಾಪಕರು, ಗದಗ ಸಾರಿಗೆ ಘಟಕದ ಡಿಸಿ ಬರುವವರೆಗೆ ಪ್ರತಿಭಟನೆಯನ್ನು ಹಿಂತೆಗೆದುಕೊಳ್ಳವುದಿಲ್ಲ ಎಂದು ಪಟ್ಟು ಹಿಡಿದರು. ಸ್ಥಳಕ್ಕಾಗಮಿಸಿದ ರೋಣ ಸಾರಿಗೆ ಘಟಕದ ಅಧಿಕಾರಿ ಎಸ್.ಎಫ್. ಗೌಡರ ಪ್ರತಿಭಟನೆಯನ್ನು ಕೈಬಿಡುವಂತೆ ಕೇಳಿಕೊಂಡರೂ ವಿದ್ಯಾರ್ಥಿಗಳು ಪಟ್ಟು ಸಡಿಲಿಸಲಿಲ್ಲ.

ವಿದ್ಯಾರ್ಥಿಗಳಿಗೆ ನಿಯಮಿತ ವಾಗಿ ಮುಂಜಾನೆ ಶಾಲಾ ಸಮಯಕ್ಕೆ ಹಾಗೂ ಸಂಜೆ ಶಾಲೆ ಬಿಟ್ಟ ನಂತರ ಹೆಚ್ಚುವರಿ ಬಸ್‌ಗಳ ಸೌಲಭ್ಯ ಕಲ್ಪಿಸುವ ವ್ಯವಸ್ಥೆ ಮಾಡಿಕೊಡಬೇಕು. ಅವು ವೇಳೆಗೆ ಸರಿಯಾಗಿ ಸಂಚರಿಸಬೇಕು ಎಂದು ವಿದ್ಯಾರ್ಥಿಗಳು ಮನವಿ ಮಾಡಿಕೊಂಡರು. ಒಂದು ವೇಳೆ ಬಸ್ ವ್ಯವಸ್ಥೆ ಮಾಡದೆ ಇದ್ದಲ್ಲಿ ರೋಣ ಸಾರಿಗೆ ಘಟಕದ ಮುಂದೆ ಹೋರಾಟ ಮಾಡುವುದಾಗಿ ಎಚ್ಚರಿಸಿದರು.

### ಪೊಲೀಸ್ ಇಲಾಖೆಯಲ್ಲಿ 1700ಕ್ಕೂ ಹೆಚ್ಚು ವಾಹನಗಳ ಸ್ಕ್ರ್ಯಾಪ್‌ಗೆ ತೀರ್ಮಾನ

# 100 ಕೋಟಿ ರೂ.ವೆಚ್ಚದಲ್ಲಿ ಹೊಸ ವಾಹನಗಳ ಖರೀದಿ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ

ಪೊಲೀಸ್ ಇಲಾಖೆಯಲ್ಲಿ 1700ಕ್ಕೂ ಹೆಚ್ಚು ವಾಹನಗಳನ್ನು ನಿರುಪಯುಕ್ತಗೊಳಿಸಲು ತೀರ್ಮಾನಿಸಲಾಗಿದ್ದು, ಹಂತ ಹಂತವಾಗಿ ಅವುಗಳನ್ನು ನಿರುಪಯುಕ್ತಗೊಳಿಸಿ, 100 ಕೋಟಿ ರೂ.ವೆಚ್ಚದಲ್ಲಿ ಹೊಸದಾಗಿ ವಾಹನಗಳನ್ನು ಖರೀದಿಸಲು ಉದ್ದೇಶಿಸಲಾಗಿದೆ ಎಂದು ಗೃಹ ಸಚಿವ ಜಿ.ಪರಮೇಶ್ವರ ತಿಳಿಸಿದರು.



ವಿಧಾನಸಭೆಯಲ್ಲಿ ಸದಸ್ಯ ಶ್ರೀನಿವಾಸ ಜಿ.ಎಚ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಗೃಹ ಸಚಿವರು, ಅಗ್ನಿಶಾಮಕ ಠಾಣೆ ಮತ್ತು ತುರ್ತು ಸೇವಾ ಇಲಾಖೆಯಲ್ಲಿ 15 ವರ್ಷಗಳ ಹಳೆಯ ವಾಹನಗಳನ್ನು ಅನುಪಯುಕ್ತಗೊಳಿಸುವ ಹಾಗೂ ಬದಲಿಗೆ ಹೊಸ ವಾಹನಗಳನ್ನು ಖರೀದಿಸಲು ಅನುಮತಿ ನೀಡುವ ಸಂಬಂಧ ಸರಕಾರದ ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಸಭೆ ಜರುಗಿದ್ದು, ಸದರಿ ಸಭೆಯಲ್ಲಿ ಅವಧಿ ಮೀರಿದ ಮತ್ತು ಸುಸ್ಥಿತಿಯಲ್ಲಿರುವ ವಾಹನಗಳನ್ನು ನಿರುಪಯುಕ್ತಗೊಳಿಸಿದಲ್ಲಿ ಇಲಾಖೆಯ ಮೂಲ ಚಟುವಟಿಕೆಗಳಿಗೆ ತೊಂದರೆ ಯಾಗುವುದರಿಂದ ವಾಹನಗಳ ನೋಂದಣಿ ಪತ್ರವನ್ನು ನವೀಕರಿಸಲು ಕೇಂದ್ರ ಸರಕಾರದ ಅನುಮತಿ ಪಡೆಯಲು ನಿರ್ಣಯ ಕೈಗೊಳ್ಳಲಾಗಿದೆ. ಅನುಮತಿ ನಿರೀಕ್ಷಣೆಯಲ್ಲಿದ್ದೇವೆ ಎಂದರು.

ಚಿಕ್ಕಮಗಳೂರು ಜಿಲ್ಲೆಯ ಅಜ್ಜಂಪುರ ತಾಲೂಕಿನಲ್ಲಿ ಅಗ್ನಿಶಾಮಕ ಠಾಣಾ ಕಟ್ಟಡ ನಿರ್ಮಾಣಕ್ಕಾಗಿ ರೂ.3 ಕೋಟಿ ಅನುದಾನ ನಿಗದಿಪಡಿಸಿದ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಮಸ್ಕಿ ತಾಲೂಕಿನಲ್ಲಿ ನೂತನವಾಗಿ ಅಗ್ನಿಶಾಮಕ ಠಾಣೆ ಸ್ಥಾಪಿಸುವುದಕ್ಕೆ ಸಂಬಂಧಿಸಿದ ಪ್ರಸ್ತಾವನೆಗೆ ಸಂಬಂಧಿಸಿದಂತೆ 2017ರಿಂದ 2022ರವರೆಗಿನ 5 ವರ್ಷದ ಅವಧಿಯಲ್ಲಿ 243 ಅಗ್ನಿ ಕರೆಗಳು ಹಾಗೂ 13 ರಕ್ಷಣಾ ಕರೆಗಳಿದ್ದು, ಮಸ್ಕಿ ತಾಲೂಕಿನಲ್ಲಿ ಅಗ್ನಿ ಅವಘಡಗಳು ಸಂಭವಿಸಿದಲ್ಲಿ ಹತ್ತಿರವಿರುವ ಲಿಂಗಸೂಗುರು 30 ಕಿ.ಮೀ ಮತ್ತು ಸಿಂಧನೂರು 30 ಕಿ.ಮೀ ಅಂತರದಲ್ಲಿರುವ ಅಗ್ನಿಶಾಮಕ ಠಾಣೆಯಿಂದ ಕಾರ್ಯಾಚರಣೆ ಕೈಗೊಳ್ಳಲಾಗುತ್ತದೆ ಎಂದರು.

# ಗುರಣ್ಣ ಬಳಗಾನೂರರಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಸಹಕಾರ ಚಳುವಳಿಯ ಬೆಳವಣಿಗೆಗೆ ಸಲ್ಲಿಸಿದ ಅನುಪಮ ಸೇವೆಯನ್ನು ಗುರುತಿಸಿ ಕರ್ನಾಟಕ ರಾಜ್ಯ ಸರಕಾರ ಮಹಾಮಂಡಳ ನಿಯಮಿತ ನೀಡುವ 2023ನೇ ಸಾಲಿನ ಸಹಕಾರ ರತ್ನ ಪ್ರಶಸ್ತಿಗೆ ಭಾಜನರಾದ ಗುರಣ್ಣ ಬಳಗಾನೂರರನ್ನು ದಿ. ಗದಗ ತಾಲೂಕ ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ನಿಯಮಿತ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಮಾರುತಿ ಶೇ.ಕೊಣ್ಣೂರ, ರಂಗಪ್ಪ ಬಿ.ದ್ಯಾವಣಶಿ, ಶಶಿಧರ ಕೆ.ಕುರಡಗಿ, ಶಿವಾಜಿ ವಿ.ಕುಲಕರ್ಣಿ, ಅನಿಲಕುಮಾರ ಎಸ್.ಪಾಟೀಲ, ಈರಪ್ಪ ಬಿ.ಬಿಂಕದಕಟ್ಟಿ, ಗುರುರಾಜ ವಿ.ಬಳಗಾನೂರ, ನಿಂಗಪ್ಪ ಕೆ.ಚಲವಾದಿ, ಶ್ರೀನಿವಾಸ ಹೆಚ್. ದ್ಯಾವನೂರ, ಶಿಲ್ಪಾ, ಚೇತನಾ ಚಂದ್ರಶೇಖರ ರಾಜೂರ, ಶೇಷಪ್ಪ ಓ.ಹುಲಿಕಟ್ಟಿ, ಫಕ್ಕಿರೇಶ ವಾಯ್.ಹಿರೇಮನಿ, ವಿದ್ಯಾಧರ ಎಲ್.ದೊಡ್ಡಮನಿ, ನಂದಾ ಆರ್. ತಿರ್ಲಾಪೂರ, ಚನ್ನವೀರಗೌಡ ಎಸ್.ಪಾಟೀಲ, ಚಂದ್ರಪ್ಪ ಬಿ.ಕರಿಕಟ್ಟಿ, ಕವಿತಾ ಎಚ್.ಬಂಡಿ, ಬಿ.ಎಚ್. ಮುಳಗುಂದ ಉಪಸ್ಥಿತರಿದ್ದರು.

### ಸಚಿವ ಎಚ್.ಕೆ. ಪಾಟೀಲರಿಂದ ಪಂದ್ಯಾವಳಿ ಉದ್ಘಾಟನೆ

# ನಾಳೆಯಿಂದ ರಾಜ್ಯಮಟ್ಟದ ಹಾಕಿ ಪಂದ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಪದವಿ ಪೂರ್ವ ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಉಪನಿರ್ದೇಶಕರು ಶಾಲಾ ಶಿಕ್ಷಣ ಇಲಾಖೆ ( ಪದವಿ ಪೂರ್ವ) , ಗದಗ ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರ ಸಂಘ (ರಿ) ಗದಗ ಕರ್ನಾಟಕ ರಾಜ್ಯ ಪದವಿ ಪೂರ್ವ ಮಹಾವಿದ್ಯಾಲಯಗಳ ನೌಕರರ ಸಂಘ ಧಾರವಾಡ, ಜಿಲ್ಲಾ ಘಟಕ ಗದಗ ಕರ್ನಾಟಕ ರಾಜ್ಯ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘ, ಜಿಲ್ಲಾ ಘಟಕ, ದೈಹಿಕ ಶಿಕ್ಷಣ ಉಪನ್ಯಾಸಕರ ಸಂಘ ಜಿಲ್ಲಾ ಘಟಕ ಹಾಗೂ ಹನುಮಾನ ಬ್ಲೆಸಿಂಗ್ಸ್ ಸ್ಪೋರ್ಟ್ಸ್ ಕ್ಲಬ್ ಬೆಟಗೇರಿ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ 2023-2024ನೇ ಸಾಲಿನ ರಾಜ್ಯ ಮಟ್ಟದ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳ ಹಾಕಿ ಪಂದ್ಯಾವಳಿಯ ಉದ್ಘಾಟನಾ ಸಮಾರಂಭವು ಬೆಟಗೇರಿಯ ಗಾಂಧಿನಗರದ ಮಹಾತ್ಮಾ ಗಾಂಧಿ ಹಾಕಿ ಕ್ರೀಡಾಂಗಣದಲ್ಲಿ ಡಿಸೆಂಬರ್ 7ರಂದು ಸಂಜೆ 5ಗಂಟೆಗೆ ಜರುಗಲಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವ ಮಧು ಬಂಗಾರಪ್ಪ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ರೋಣ ಶಾಸಕ ಜಿ.ಎಸ್.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ನಗರಸಭೆ ಉಪಾಧ್ಯಕ್ಷೆ ಸುನಂದಾ ಬಾಕಳೆ ಆಗಮಿಸುವರು.

ಪದವಿ ಪೂರ್ವ ಶಾಲಾ ಶಿಕ್ಷಣ ಇಲಾಖೆಯ ನಿರ್ದೇಶಕರಾದ ಸಿಂಧು ರೂಪೇಶ, ವಾಣಿಜ್ಯ ತೆರಿಗೆ ಆಯುಕ್ತರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ವಿಶೇಷ ಆಹ್ವಾನಿತರಾಗಿ ಆಗಮಿಸುವರು. ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಡಾ. ಕೃಷ್ಣಪ್ಪ ಪಿ. ಹಾಗೂ ಗದಗ ಬೆಟಗೇರಿ ನಗರಸಭೆ ಸದಸ್ಯ ಸುರೇಶ ಕಟ್ಟಿಮನಿ ಸ್ವಾಗತ ಕೋರಿದ್ದಾರೆ.

### ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯದಲ್ಲಿ 'ಕನ್ನಡ ಹಬ್ಬ'

# ಕನ್ನಡವನ್ನು ನಮ್ಮ ತಾಯಿಯಂತೆ ಗೌರವಿಸಬೇಕು



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಇತ್ತೀಚೆಗೆ 'ಕನ್ನಡ ಹಬ್ಬ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ, ಪ್ರಾಚಾರ್ಯ ಡಾ. ಎಂ.ಎಂ. ಅವಟಿ ತಾಯಿ ಭುವನೇಶ್ವರಿಯ ಪೂಜೆಯನ್ನು ನೆರವೇರಿಸಿದರು.

ವಿದ್ಯಾಪೀಠದ ಕಾರ್ಯದಾರ್ಶಿ ಪ್ರೊ. ಎಸ್.ಎಸ್. ಪಟ್ಟಣಶೆಟ್ಟಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕನ್ನಡವನ್ನು ನಮ್ಮ ತಾಯಿಯಂತೆ ಪ್ರೀತಿಸಬೇಕು, ಗೌರವಿಸಬೇಕು. ಅದರೊಟ್ಟಿಗೆ ಅನ್ಯ ಭಾಷೆಗಳನ್ನೂ ಗೌರವಿಸುವ ವಿಶಾಲ ಮನಸ್ಸು ನಮಗಿರಬೇಕು ಎಂದರು.

ಡಾ. ರಶ್ಮಿ ಅಂಗಡಿ ಸಿದ್ಧಪಡಿಸಿದ ತ್ರಿವಿಧ ದಾಸೋಹಿ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಕನ್ನಡ ಸಾಹಿತ್ಯಕ್ಕೆ ನೀಡಿದ ಕೊಡುಗೆಯನ್ನು ಸ್ಮರಿಸುವ 'ಕನ್ನಡದ ಕುಲಗುರುಗಳು' ಕಿರುಚಿತ್ರವನ್ನು ಪ್ರದರ್ಶಿಸಲಾಯಿತು.

> ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ತಾಂತ್ರಿಕ ವಿದ್ಯಾರ್ಥಿಗಳು ಕನ್ನಡವನ್ನು ಹೆಚ್ಚು ಪ್ರೀತಿಯಿಂದ ಕಂಡು, ಅವರು ಉದ್ಯೋಗವನ್ನು ಅರಸಿ ಹೋದಾಗಲೂ ಕನ್ನಡದ ಕಂಪನ್ನು ಎಲ್ಲೆಡೆ ಪಸರಿಸಬೇಕು ಎಂದರು. ಪ್ರಾಚಾರ್ಯ ಡಾ. ಎಂ.ಎಂ. ಅವಟಿ ನಮ್ಮ ಸಂಸ್ಕೃತಿ, ಇತಿಹಾಸವನ್ನು ನಾವು ಅರಿತು ನಡೆಯಬೇಕು ಎಂದರು.

ಲಕ್ಷ್ಮೀ ಮುಧೋಳ ಸ್ವಾಗತ ನೃತ್ಯ ಮಾಡಿದರು. ಪ್ರಾಧ್ಯಾಪಕ ಡಾ. ಆಯ್.ಎಸ್. ಪಾಟೀಲ ಪ್ರಾಸ್ತಾವಿಕ ನುಡಿಗಳನ್ನಾಡಿದರು. ದೀಪ್ತಿ ಗಾಣೀಗೇರ ಸ್ವಾಗತಿಸಿದರು. ಅನುಷಾ ಶೇಠ್ ಪ್ರಾರ್ಥಿಸಿದರು. ಶೃತಿ ಹವಳದ ಅತಿಥಿಗಳನ್ನು ಪರಿಚಯಿಸಿದರು. ವರ್ಷಾ ಮಹೇಂದ್ರಕರ ಮತ್ತು ಮಾನ್ಯ ಶೆಟ್ಟಿ ಕನ್ನಡ ನಾಡು ನುಡಿ ಕುರಿತು ಮಾತನಾಡಿದರು.

ವೇದಿಕೆಯಲ್ಲಿ ಅಧ್ಯಾಪಕರಾದ ಡಾ. ವಿ.ಟಿ. ಮಾಗಳದ, ಗದಗ ತಾಲೂಕಾ ಕಸಾಪ ಅಧ್ಯಕ್ಷೆ ಡಾ. ರಶ್ಮಿ ಅಂಗಡಿ, ಕಾರ್ಯಕ್ರಮದ ಸಂಚಾಲಕ ಪ್ರೊ. ಮಂಜುನಾಥ ಕಮ್ಮಾರ, ಪ್ರೊ. ಸ್ನೇಹಲತಾ ಹಿರೇಮಠ ಉಪಸ್ಥಿತರಿದ್ದರು.

ವಿಜಯಲಕ್ಷ್ಮೀ ಗೌಡರ, ಸಂಗೀತಾ ಶಿವಕಾಳಿಮಠ, ಕಾವೇರಿ ಜೋಬಾಳೆ, ಶಿವಮೂರ್ತಯ್ಯ ರೇಷ್ಮಿ, ಜಿಲಾನ್ ಗದವಾಲ್, ಶುಭಂ, ಆಕಾಂಕ್ಷ ಕಲ್ಯಾಣಶೆಟ್ಟಿ, ಶಶಿಧರ ಮಾಲೋಜಿ, ಶೇಶಾದ್ರಿ ಕುಲಕರ್ಣಿ, ವೈಷ್ಣವಿ ಹತ್ತಿಕಾಳ, ಭೂಮಿಕಾ ಹಿರೇಮಠ, ನವೀನ ಬಡಿಗೇರ, ಅಫ್ಜಲ್ ಭಗವಾನ್, ನಚಿಕೇತ ಪ್ರಜ್ಞಾ ಪಾಟೀಲ ಸಹಕಾರ ನೀಡಿದರು.

ರತ್ನಕ್ಕ ಪಾಟೀಲ, ಪಾರ್ವತಿ ಬೇವಿನಮರದ, ವಿದ್ಯಾ ಗಂಜಿಹಾಳ, ಪುಷ್ಪಾ ಭಂಡಾರಿ, ಮಧುರಾಜ್ ರಾಂಪುರ್ ಹಾಜರಿದ್ದರು. ಚೇತನಾ ಸುಳ್ಳದ, ಜ್ಯೋತಿ ಸಣ್ಣಪ್ಪನವರ ಕಾರ್ಯಕ್ರಮವನ್ನು ನಿರೂಪಿಸಿದರು. ವಿಶ್ವನಾಥ ಬೇಂದ್ರೆ ವಂದಿಸಿದರು. ಸಂಜೆ ನಡೆದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಆಕಾಂಕ್ಷಾ, ಶಿವಮೂರ್ತಯ್ಯ ರೇಷ್ಮಿ ನಿರೂಪಿಸಿದರು.

# ಝುಯನ್ ತಹಶೀಲ್ದಾರಗೆ 'ಕಲಾಪದಕ'

■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಚಂಡಾವರಂ ಚಿತ್ರಕಲಾ ನೀಲಿಯಂ ವಿಶಾಖಪಟ್ಟಣಂ ಆಂಧ್ರ ಪ್ರದೇಶ ಇವರ ಸಂಯುಕ್ತ ಆಶ್ರಯದಲ್ಲಿ ಜರುಗಿದ 6ನೇ ವರ್ಷದ ಆಲ್ ಇಂಡಿಯಾ ಚಿಲ್ಡ್ರನ್ ಆರ್ಟ್ ಕಾಂಪಿಟೇಶನ್‌ನಲ್ಲಿ ಗದಗ ಜಿಲ್ಲೆಯ ಎಂ.ಕೆ. ಕೊರ್ಲಹಳ್ಳಿ ಫೌಂಡೇಶನ್ ಟ್ರಸ್ಟ್‌ನ ವಿದ್ಯಾರ್ಥಿ ರೆಹಮತ್ ನಗರದ ಝುಯನ ಖಾ. ತಹಶೀಲ್ದಾರ ಈತ ಪರಿಸರ ವಿಷಯ ಪೂರಕವಾದ ಚಿತ್ರ ರಚಿಸಿ, ಕಲಾಪದಕ ಸ್ಮರಣಕದೊಂದಿಗೆ ಪ್ರಶಸ್ತಿಯನ್ನು ತನ್ನದಾಗಿಸಿಕೊಂಡಿದ್ದಾನೆ.



ಈ ವಿದ್ಯಾರ್ಥಿಗೆ ಚಿತ್ರಕಲೆ ಮತ್ತು ಕರಕುಶ ತರಬೇತಿ ನೀಡಿದ ಡಾ. ಜಾಕೀರಹುಸೇನ ಎಂ. ಕೊರ್ಲಹಳ್ಳಿ ಇವರಿಗೆ ಮತ್ತು ಸಾಧಕ ವಿದ್ಯಾರ್ಥಿಗೆ ಎಂ.ಕೆ. ಕೊರ್ಲಹಳ್ಳಿ ಫೌಂಡೇಶನ್ ಟ್ರಸ್ಟ್ ಅಧ್ಯಕ್ಷ ಎಂ.ಕೆ. ಕೊರ್ಲಹಳ್ಳಿ, ಸದಸ್ಯ ವಿನಾಯಕ ಬಳಗಾನೂರ, ರೆಹಮತ್ ನಗರದ ಅಂಗನವಾಡಿ ಕಾರ್ಯಕರ್ತರಾದ ಕಸ್ತೂರಿ ಆಲೂರ್, ಸಾವಿತ್ರಿ ಕುಮಾರಿ, ಸಾಹೇರಾ ಕೊರ್ಲಹಳ್ಳಿ, ಮಾಲನ ಸುಂಕದ್, ಜಿ.ಆರ್. ಭಜಂತ್ರಿ ಹಾಗೂ ರಾಯಲ್ ಇಂಗ್ಲಿಷ್ ಮಾಧ್ಯಮ ಶಾಲೆಯ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka